ಸಂಪುಟ : 10 ಸಂಚಿಕೆ: 104 ಪುಟ : 4+2 ಬೆಲೆ: 3.00 ರವಿವಾರ ಮೇ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 104 Pages : 4+2 Price : 3.00 Sunday May 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ ಡೇ ಯೋಜನೆಯ ಸ್ವ ಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬೆಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ.

ಅಭ್ಯರ್ಥಿಯು 18–45 ವರ್ಷ ವಯೋಮಾನದವರಾಗಿರಬೇಕು, ನಲ್ಮ ಡೇ ಯೋಜನೆಯ ಸ್ವ ಸಹಾಯ ಸಂಘದ ಸಕ್ರಿಯ ಸದಸ್ಯರಾಗಿರಬೇಕು.

ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಜೂನ್ 16 ರ ಸಂಜೆ 5 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಪೌರಾಯುಕ್ತರು ಗದಗ– ಬೆಟಗೇರಿ ನಗರಸಭೆ ಗದಗ ರವರ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗಾಗಿ ಗದಗ–ಬೆಟಗೇರಿ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ತೋಂಟದಾರ್ಯ ರಥಬೀದಿ ವಿಚಾರ: ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ಹೆಸರಿನಲ್ಲಿ ಗೊಂದಲ

# ರಥಬೀದಿ ಟೆಂಡರ್‌ನಲ್ಲಿ ಗೋಲ್‌ಮಾಲ್ ಇಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ಮಠದ ಜಾತ್ರೆ ಜರುಗುವ ಸ್ಥಳದ ವಿಚಾರವಾಗಿ ಇನ್ನು ಮುಂದೆ ಕೇವಲ ಕಾನೂನು ಹೋರಾಟ ನಡೆಸುವುದಾಗಿ ಹೇಳಿದ್ದವರು ಈಗ ಮತ್ತೆ ಬಂದ್‌ಗೆ ಕರೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಯಾವುದೇ ಕಾರಣಕ್ಕೂ ಬಂದ್‌ಗೆ ಅವಕಾಶ ನೀಡಬಾರದು ಎಂದು ಜಾತ್ರಾ ಕಮಿಟಿ ಅಧ್ಯಕ್ಷ ಡಾ. ಧನೇಶ ದೇಸಾಯಿ ಹೇಳಿದರು.

ಶನಿವಾರ ಶ್ರೀಮಠದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಎಲ್ಲಿಯೂ ಇಲ್ಲದ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ಹೆಸರಿನಲ್ಲಿ ರಾಜು ಖಾನಪ್ಪನವರ, ತೋಂಟದಾರ್ಯ ಮಠದ ವಿಚಾರವಾಗಿ ಜನರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ. ಅಂಥವರ ವಿರುದ್ಧ ಶ್ರೀಮಠ ಸೂಕ್ತ ಕಾನೂನು ಹೋರಾಟ ನಡೆಸಲಿದೆ ಎಂದು ತಿಳಿಸಿದರು.

ತೋಂಟದಾರ್ಯ ಮಠದ ರಥಬೀದಿ ವಿಚಾರವಾಗಿ ಕೆಲ ದಿನಗಳ ಹಿಂದೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ, ರಸ್ತೆ ಶ್ರೀಮಠಕ್ಕೆ ಸೇರಿದ್ದು ಎಂದು ನಗರಸಭೆ ಅಧಿಕಾರಿಗಳೇ ಸ್ಪಷ್ಟಪಡಿಸಿದ್ದಾರೆ. ತರುವಾಯ ರಾಜು ಖಾನಪ್ಪನವರ, ಇನ್ನು ಮುಂದೆ ಬಹಿರಂಗ ಹೋರಾಟ ನಡೆಸುವುದಿಲ್ಲ,



ಕಾನೂನು ಹೋರಾಟ ಮಾತ್ರ ಮಾಡುವುದಾಗಿ ಹೇಳಿದ್ದರು. ಈಗ ಮತ್ತೆ ಗದಗ ಬಂದ್‌ಗೆ ಕರೆ ಕೊಟ್ಟಿರುವುದರ ಹಿಂದೆ ಪ್ರಚಾರದ ತಂತ್ರ ಅಡಗಿದೆ ಎಂದು ಆರೋಪಿಸಿದರು.

ರಥೋತ್ಸವ ನಡೆದು 40 ದಿನಗಳವರೆಗೆ ಮಾತ್ರ ಜಾತ್ರೆ ನಡೆಯುತ್ತದೆ. ಅದಕ್ಕೆ ಬೇಕಾದ ಎಲ್ಲ ರೀತಿಯ ಪರವಾನಗಿ ಪಡೆಯಲಾಗಿದೆ. ಟೆಂಡರ್ ಪಾರದರ್ಶಕವಾಗಿ ನಡೆಸಿದ್ದೇವೆ. ತೆರಿಗೆಯನ್ನೂ ಭರಿಸುತ್ತೇವೆ. ಇದೇ ಮೇ 29ಕ್ಕೆ ಜಾತ್ರೆ ಕೊನೆಗೊಳ್ಳಲಿದೆ. ಇಷ್ಟಾಗಿಯೂ ಜಾತ್ರೆ ಮುಗಿಯಲು ಇನ್ನು ಕೇವಲ 3 ದಿನ ಬಾಕಿ ಇರುವಾಗ ಬಂದ್ ಕರೆ ನೀಡಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

ಶ್ರೀಮಠ ಹಿಂದಿನಿಂದಲೂ ಕೋಮು ಸೌಹಾರ್ದತೆಗೆ ಹೆಸರಾಗಿದ್ದು, ನೂರಾರು ವರ್ಷಗಳ ಇತಿಹಾಸ ಹೊಂದಿದೆ. ಸಾರ್ವಜನಿಕ ಉದ್ದೇಶಕ್ಕೆ ಶ್ರೀಮಠದ ಬೆಲೆಬಾಳುವ ಆಸ್ತಿಯನ್ನು ದಾನವಾಗಿ ನೀಡಿದ ಹೆಗ್ಗಳಿಕೆಯನ್ನೂ ಹೊಂದಿದೆ. ಆದರೂ ಕೆಲವರು ಶ್ರೀಮಠದ ಲಿಂಗೈಕ್ಯ ಶ್ರೀಗಳ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಅದಕ್ಕೆ ಕಾನೂನಿನ ಮೂಲಕವೇ ಕಡಿವಾಣ ಹಾಕಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

> ಶ್ರೀಮಠದ ಮುಂದಿನ ರಸ್ತೆಯಲ್ಲಿ ವ್ಯಾಪಾರ ನಡೆಸಲು ಸ್ಥಳೀಯ ವ್ಯಕ್ತಿಗೆ ಟೆ–ಂಡರ್ ನೀಡಲಾಗಿದೆ. ಶೇ. 88ರಷ್ಟು ಜನ ಸ್ಥಳೀಯರಿಗೆ ನೀಡಲಾಗಿದ್ದು, ಕೇವಲ ಶೇ. 10–12ರಷ್ಟು ಹೊರ ರಾಜ್ಯದವರಾಗಿದ್ದಾರೆ. ಆದರಿವರು, ಒಂದೇ ಸಮುದಾಯದ ಜನರಿಗೆ ನೀಡಲಾಗಿದೆ ಎಂದು ಆರೋಪಿಸುತ್ತಿದ್ದಾರೆ. ನಮ್ಮ ಬಳಿ ವ್ಯಾಪಾರಸ್ಥರ ಪಟ್ಟಿ ಇದೆ, ಯಾರು ಯಾವ ಸಮುದಾಯಕ್ಕೆ ಸೇರಿದ್ದಾರೆ ಎನ್ನುವುದನ್ನು ಅವರೇ ನಿರ್ಧರಿಸಲಿ.
>
> **– ಡಾ. ಧನೇಶ ದೇಸಾಯಿ.**
> ಜಾತ್ರಾ ಕಮಿಟಿ ಅಧ್ಯಕ್ಷರು.

ಸುದ್ದಿಗೋಷ್ಠಿಯಲ್ಲಿ ಶ್ರೀಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ್, ಮಂಜುನಾಥ ಐಲಿ, ಶೇಕಣ್ಣ ಕವಳಿಕಾಯಿ, ಮಾರ್ತಾಂಡಪ್ಪ ಹಾದಿಮನಿ, ವಿದ್ಯಾಧರ ದೊಡ್ಡಮನಿ, ಪ್ರಕಾಶ ಅಸುಂಡಿ, ಐ.ಬಿ. ಬೆನಕೊಪ್ಪ, ಚಂದ್ರಕಾಂತ ಚವ್ಹಾಣ, ಚಂದ್ರು ತಡಸದ, ಕೊಟ್ರೇಶ ಮೆಣಸಿನಕಾಯಿ ಮುಂತಾದವರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಸಿದ್ಧತೆ ಪರಿಶೀಲನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೇ.26ರಿಂದ ಪ್ರಾರಂಭವಾಗಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾ ಉಪನಿರ್ದೇಶಕ ಆರ್.ಎಸ್. ಬುರಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಡಿಡಿಪಿಐ ಆರ್.ಎಸ್. ಬುರಡಿ, ಪಟ್ಟಣದಲ್ಲಿ ಒಟ್ಟು ಎರಡು ಪರೀಕ್ಷಾ ಕೇಂದ್ರಗಳಿದ್ದು, ಶ್ರೀ ಉಮಾ ವಿದ್ಯಾಲಯ ಪುರಸಭೆ ಹೈಸ್ಕೂಲ್ ಮತ್ತು ತಾಯಿ ಪಾರ್ವತಿ ಮಕ್ಕಳ ಬಳಗದ ಪ್ರೌಢಶಾಲೆಯಲ್ಲಿ ಪರೀಕ್ಷೆಗಳು ನಡೆಯಲಿವೆ. ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಸುಮಾರು 20 ಪರೀಕ್ಷಾ ಕೇಂದ್ರಗಳನ್ನು ಮಾಡಲಾಗಿದ್ದು, ಸುಮಾರು 5680 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಮೊದಲಿನಂತೆ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಿಗೆ ಅವಶ್ಯಕ ಸೌಲಭ್ಯಗಳನ್ನು ಒದಗಿಸುವದು ಮತ್ತು ಕಟ್ಟುನಿಟ್ಟಿನ ಪರೀಕ್ಷೆ ನಡೆಸುವ ನಿಟ್ಟಿನಲ್ಲಿ ಅವಶ್ಯಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಅವಶ್ಯಕ ಸಿಬ್ಬಂದಿಗಳನ್ನು ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಲಾಗಿದ್ದು, ಸುಸೂತ್ರವಾಗಿ ಪರೀಕ್ಷೆಗಳು ನಡೆಯುವಂತೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಮುಖ್ಯೋಪಾಧ್ಯಯರಾದ ಜೆ.ಡಿ. ಲಮಾಣಿ, ಎಸ್.ಎಚ್. ಪೂಜಾರ ಮುಂತಾದವರು ಇದ್ದರು.

### ಒಂದು ಕೈಲಿ ಮೊಬೈಲ್, ಇನ್ನೊಂದು ಕೈಲಿ ಸಿಗರೇಟು | ಕೋಟ್ಪಾ ಕಾಯ್ದೆ ಇಲ್ಲಿ ಲೆಕ್ಕಕ್ಕಿಲ್ಲ

# 'ಅಮಲಾಪುರ'ಗಳಾಗುತ್ತಿವೆ ಸಾರ್ವಜನಿಕ ಸ್ಥಳಗಳು!

■ವಿಜಯಸಾಕ್ಷಿ ಸುದ್ದಿ, ಡಂಬಳ


ಮುಂಡರಗಿ ತಾಲೂಕಿನ ಗ್ರಾಮಗಳಲ್ಲಿ ಬಹುತೇಕ ಸಂಜೆಯಾಗುತ್ತಿದ್ದಂತೆ ಗ್ರಾ.ಪಂ ಕಾಂಪೌಂಡ್ ಹತ್ತಿರ, ರಾತ್ರಿ ಹೊತ್ತು ಕೆರೆಯ ತಟದಲ್ಲಿ ಅಲ್ಲದೆ ಕಾಫಿ–ಟೀ ಕೇಂದ್ರಗಳು ಧೂಮಪಾನದ ಅಡ್ಡೆಗಳಾಗಿ ಬದಲಾಗಿದ್ದು, ಕೋಟ್ಪಾ ಕಾಯ್ದೆ ಇಲ್ಲಿ ಲೆಕ್ಕಕ್ಕಿಲ್ಲದಂತಾಗಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳೇ ಇವರ ಖಾಯಂ ಗ್ರಾಹಕರಾಗಿದ್ದು, ಇವರ ಕೈಗೆ ಕಾಫಿ–ಟೀ, ಹಾಲು ಕೊಡುವ ಬದಲು ಸರಾಯಿ, ಬೀಡಿ, ಸಿಗರೇಟು ಇತ್ಯಾದಿ ನೀಡಿ ಅಮಲೇರಿಸಿಕೊಳ್ಳುವಂತೆ ಮಾಡುತ್ತಿದ್ದರೂ ಕ್ರಮ ವಹಿಸಬೇಕಾದ ಅಧಿಕಾರಿಗಳು ಮಾತ್ರ ಕಣ್ಮುಚ್ಚಿ ಕುಳಿತಿರುವುದು ಸಾರ್ವಜನಿಕರ ಟೀಕೆಗೆ ಗುರಿಯಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಸಿಗರೇಟು ಸಹಿತ ಇತರೆ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಕಾನೂನಿನಡಿ ನಿಷೇಧವಿದೆ. ಇದನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಕೇಸು ಹಾಕಲು ಕೂಡ ಅವಕಾಶವಿದೆ. ಕಾನೂನು ಹೀಗೆ ಹೇಳುತ್ತಿದ್ದರೂ ಅಂಗಡಿ ಮಾಲಿಕರು ಲಾಭದ ಉದ್ದೇಶದಿಂದ ವಿದ್ಯಾರ್ಥಿಗಳಿಗೆ ಈ ಉತ್ಪನ್ನಗಳನ್ನು ನಿರಾತಂಕವಾಗಿ ಮಾರಾಟ ಮಾಡುತ್ತಾ ವಿದ್ಯಾರ್ಥಿಗಳ ಬದುಕಿನಲ್ಲಿ ಆಟವಾಡುತ್ತಿದ್ದಾರೆ. ಇಲ್ಲಿನ ಮೇವುಂಡಿ ಗ್ರಾಮದ ಬಸ್ ನಿಲ್ದಾಣ, ಪ್ರೌಢಶಾಲೆಯ ಪಕ್ಕದ ಅಂಗಡಿ, ಕೊರ್ಲಹಳ್ಳಿ, ಬಾಗೆವಾಡಿ, ಹಿರೇವಡ್ಡಟ್ಟಿ,



ಜಂತ್ಲಿ ಶಿರೂರ, ಹೆಸರೂರ, ಶಿವಾಜಿನಗರ, ಕದಾಂಪುರ ಗ್ರಾಮದ ಪ್ರಾಥಮಿಕ ಶಾಲೆಯ ಪಕ್ಕದ ಅಂಗಡಿಗಳಲ್ಲಿ, ಬರದೂರ ಗ್ರಾಮದ ಶಾಲಾ ಪಕ್ಕ ಹೀಗೆ ಡಂಬಳ ಹೋಬಳಿಯಾದ್ಯಂತ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ತಡೆ ನೀಡಲು ಸಮಾಜ ಕಲ್ಯಾಣ ಅಧಿಕಾರಿ ಹುದ್ದೆ ಖಾಲಿ ಇದ್ದರೆ, ಉಳಿದ ತಾಲೂಕಿನಲ್ಲಿರುವ ಅಧಿಕಾರಿಗಳು ಈ ಬಗ್ಗೆ ಯಾವುದೇ ಜಾಗೃತಿ ಕಾರ್ಯ ಹಮ್ಮಿಕೊಳ್ಳುವ, ದಾಳಿ ನಡೆಸುವ ಮುತುವರ್ಜಿ ತೋರುತ್ತಿಲ್ಲ. ಡಂಬಳ ಗ್ರಾಮದ ಗ್ರಾ.ಪಂ ಆವರಣದ ಹಳೆಯ ಕಟ್ಟದ ಹಿಂದೆ ರಾತ್ರಿಯಾಗುತ್ತಿದ್ದಂತೆ ಯುವಕರು ಮೊಬೈಲ್ ಗೇಮ್‌ಗಳನ್ನು ಆಡುತ್ತಾ ಸಿಗರೇಟ್ ಸುಡುವುದು ಸಾಮಾನ್ಯವಾಗಿದೆ. ಪಾಲಕರ ಉದಾಸೀನತೆ ಅಥವಾ ಅತಿಯಾದ ನಂಬಿಕೆಯೂ ಯುವಕರ ಈ ವ್ಯಸನಕ್ಕೆ ಕಾರಣವಾಗಿದೆ. ಜಿಲ್ಲಾ ಕೇಂದ್ರದ ಪ್ರತಿಷ್ಠಿತ ಶಾಲಾ–ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಓದಿಗೆ ತಿಲಾಂಜಲಿಯಿಟ್ಟು ಗೂಡಂಗಡಿಗಳು, ಕಾಫಿ ಬಾರ್‌ಗಳಿಗೆ ಹೋಗಿ ದುಶ್ಚಟಗಳಿಗೆ ದಾಸರಾಗಿ, ಸಮಾಜಘಾತುಕರಾಗಿ ಬದಲಾಗುತ್ತಿರುವುದು ಆತಂಕದ ವಿಚಾರವಾಗಿದೆ. ಹೋಬಳಿಯ ಕೆಲ ಗ್ರಾಮಗಳಲ್ಲಿ ಗೂಡಂಗಡಿಗಳಲ್ಲಿ ಗಾಂಜಾ, ಸರಾಯಿ, ಸಿಗರೇಟ್ ಮಾರಾಟ ನಡೆಯುತ್ತಿದೆ ಎಂಬ ಅನುಮಾನವನ್ನು ಜನಪರ ಸಂಘಟನೆಗಳ ಮುಖಂಡರು ವ್ಯಕ್ತಪಡಿಸಿದ್ದಾರೆ. ಸಂಬಂಧಪಟ್ಟ ಇಲಾಖೆಗಳು ಕೂಡಲೇ ಕ್ರಮವಹಿಸಿ ಅಕ್ರಮ ದಂಧೆಯನ್ನು ತಡೆಯಬೇಕು. ಇಲ್ಲವಾದಲ್ಲಿ ಭವಿಷ್ಯದಲ್ಲಿ ಭಾರೀ ಬೆಲೆಯನ್ನು ತೆರಬೇಕಾಗುತ್ತದೆ ಎನ್ನುವುದು ಸಾರ್ವಜನಿಕರ ಬಾಯಿಂದ ಕೇಳಿಬರುತ್ತಿರುವ ಮಾತು.

> ಶಾಲಾ–ಕಾಲೇಜು ಯುವಕರು ದುಶ್ಚಟಗಳ ದಾಸರಾಗುತ್ತಿದ್ದಾರೆ. ಸರಾಯಿ, ಸಿಗರೇಟ್, ಗಾಂಜಾ ಮಾರಾಟವನ್ನು ತಡೆಯುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು. ಆದರೆ, ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ಕೂಡ ಇದರಲ್ಲಿ ಶಾಮಿಲಾಗಿರುವ ಅನುಮಾನ ಮೂಡುತ್ತಿದೆ. ಕಾರಣ, ಅದೆಷ್ಟೋ ಯುವಕರು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಇವುಗಳ ತಡೆಗೆ ಸೂಕ್ತ ಕ್ರಮ ವಹಿಸಬೇಕಿದೆ.
>
> **– ಶಿವಪ್ಪ ಬಿಡನಾಳ.**
> **ಸಾಮಾಜಿಕ ಹೋರಾಟಗಾರ.**



ಗದಗ; ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ಭಾಗವಹಿಸಲು ಗದಗ ನಗರಕ್ಕೆ ಆಗಮಿಸಿದ್ದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ ಅವರನ್ನು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಪ್ರೊಫೆಸರ್ ಎಸ್ ಎಸ್ ಪಟ್ಟಣಶೆಟ್ಟರ್ ಅವರು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮೀಜಿ ಅವರ ಕುರಿತಾದ ಕಾರುಣ್ಯದೂಡಲು ಪುಸ್ತಕ ಕಾಣಿಕೆಯಾಗಿ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಕೊಟ್ರೇಶ್ ಮೆಣಸಿನಕಾಯಿ ಸೇರಿದಂತೆ ಮುಂತಾದವರು ಹಾಜರಿದ್ದರು.

### ಕೇಂದ್ರಕ್ಕೆ ಶಾಂತಿಗಾಗಿ ನಾಗರಿಕರ ವೇದಿಕೆ ಒತ್ತಾಯ

## ಛತ್ತೀಸ್ ಘಡದಲ್ಲಿ ನಕ್ಸಲರ ಹತ್ಯೆ ನಿಲ್ಲಿಸಿ, ಮಾತುಕತೆ ನಡೆಸಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಛತ್ತೀಸ್ ಘಡದಲ್ಲಿ ಕೇಂದ್ರ ಸರ್ಕಾರ ನಡೆಸಿರುವ ನಕ್ಸಲರ ಹಾಗೂ ಆದಿವಾಸಿಗಳ ಮಾರಣಹೋಮವನ್ನು ಖಂಡಿಸುತ್ತೇವೆ ಮತ್ತು ಅಲ್ಲಿ ಭದ್ರತಾ ಪಡೆಗಳ ನಡೆಸುತ್ತಿರುವ ಕಾರ್ಯಾಚರಣೆ ನಿಲ್ಲಿಸಿ ಮಾತುಕತೆಯ ಮೂಲಕ ಶಾಂತಿ ಮರುಸ್ಥಾಪಿಸಿ ಎಂದು ರಾಜ್ಯದ ಶಾಂತಿಗಾಗಿ ನಾಗರಿಕರ ವೇದಿಕೆ ಒತ್ತಾಯಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ವೇದಿಕೆಯು, ಛತ್ತೀಸ್ ಘಡದಲ್ಲಿ ಕಳೆದ ಆರು ತಿಂಗಳಿಂದ CRPF, CoBRA, ಗ್ರೇ ಹೌಂಡ್ ಮುಂತಾದ ಪಡೆಗಳ ನೇತೃತ್ವದಲ್ಲಿ ನಕ್ಸಲ್ ಚಳವಳಿಯನ್ನು ಹತ್ತಿಕ್ಕಲು ತೀವ್ರತರನಾದ ಪ್ರಯತ್ನಗಳು ನಡೆಯುತ್ತಿವೆ. ಇದುವರೆಗೆ ಕಳೆದ 6 ತಿಂಗಳಲ್ಲಿ 300ಕ್ಕೂ ಹೆಚ್ಚು ಜನರು ಕೊಲ್ಲಲ್ಪಟ್ಟಿದ್ದಾರೆ. ಇದರಲ್ಲಿ ಕೆಲವರು ಪ್ರಮುಖ ನಕ್ಸಲರು ಇದ್ದಾರೆ. ಆದರೆ ದೊಡ್ಡ ಸಂಖ್ಯೆಯಲ್ಲಿ ಆದಿವಾಸಿ ಯುವಕರನ್ನೂ ಸಹ ನಕ್ಸಲ್ ಹಣೆಪಟ್ಟಿ ಕಟ್ಟಿ ಕೊಲ್ಲಲಾಗಿದೆ. ಇದು ಖಂಡನೀಯ ಎಂದು ಹೇಳಿದೆ.

## ಶೈಲಜಾ ಹೂಗಾರಗೆ ಡಾಕ್ಟರೇಟ್

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಹಿರಿಯ ಪತ್ರಕರ್ತೆ ಶ್ರೀಮತಿ ಶೈಲಜಾ ಸಿದ್ದಪ್ಪ ಹೂಗಾರ ಅವರು "ಕನ್ನಡ ಪ್ರಮುಖ ದಿನಪತ್ರಿಕೆಗಳ ಭಾನುವಾರದ ಪುರವಣಿಗಳ ಓದುಗರು: ಒಂದು ವಿಶ್ಲೇಷಣಾತ್ಮಕ ಅಧ್ಯಯನ" ವಿಷಯ ಕುರಿತು ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಷಯದಲ್ಲಿ ಸಲ್ಲಿಸಿದ್ದ ಮಹಾ ಪ್ರಬಂಧಕ್ಕೆ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯು ಡಾಕ್ಟರೇಟ್ ಪದವಿ ನೀಡಿದೆ.

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಪ್ರೊ ಜೆ. ಎಂ. ಚಂದುನವರ ಅವರು ಪಿಎಚ್ ಡಿ ಮಾರ್ಗದರ್ಶಕರಾಗಿದ್ದರು.

## 'ಶರಣ ಸಂಗಮ' ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ. 25ರಂದು ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1647ನೇ ಶರಣ ಸಂಗಮದಲ್ಲಿ 'ಸಹಜ ಶಿವಯೋಗ ಹಾಗೂ ಬಸವತತ್ವ ಪ್ರಸಾರದಲ್ಲಿ ಪೂಜ್ಯ ಅಕ್ಕ ಅನ್ನಪೂರ್ಣ ಒಂದು ನೆನಪು' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ರೇಣುಕಾ ಕರೇಗೌಡ್ರ ಸಹಜ ಶಿವಯೋಗ ನಡೆಸುವರು ಹಾಗೂ ಶರಣೆ ಗೌರಕ್ಕ ಎನ್.ಬಡಿಗಣ್ಣವರ ಇವರು ಉಪನ್ಯಾಸ ನೀಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಸರ್ ಎಂ. ವಿಶ್ವೇಶ್ವರಯ್ಯ ಟೆಕ್ನಿಕಲ್ ಸೆಂಟರ್ ಉದ್ಘಾಟನೆ ಇಂದು: ಎಂ.ಸಿ. ಐಲಿ ಮಾಹಿತಿ

## ಸಿವಿಲ್ ಇಂಜಿನಿಯರ್ಸ್‌ಗೆ ನೂತನ ಕಟ್ಟಡ




■ವಿಜಯಸಾಕ್ಷಿ ಸುದ್ದಿ, ಗದಗ

ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಷನ್ ಗದಗ ಜಿಲ್ಲಾ ಕಚೇರಿಯ ನೂತನ ಕಟ್ಟಡ 'ಸರ್ ಎಂ. ವಿಶ್ವೇಶ್ವರಯ್ಯ ಟೆಕ್ನಿಕಲ್ ಸೆಂಟರ್' ಮೇ 25ರಂದು ಬೆಳಗ್ಗೆ 11 ಗಂಟೆಗೆ ಉದ್ಘಾಟನೆಗೊಳ್ಳಲಿದೆ ಎಂದು ಕಟ್ಟಡ ನಿರ್ಮಾಣ ಸಮಿತಿ ಚೇರಮನ್ ಎಂ.ಸಿ. ಐಲಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ತೋಂಟದ ಸಿದ್ದರಾಮ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸುವರು. ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ನೂತನ ಕಟ್ಟಡವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಸಿದ್ದು ಬೇವೂರ, ಪೌರಾಯುಕ್ತ ರಾಜಾರಾಮ ಪವಾರ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ ಆಗಮಿಸಲಿದ್ದಾರೆ. ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ ಅಸೋಸಿಯೇಶನ್ ಅಧ್ಯಕ್ಷ ಎಂ.ಪಿ. ಪಾಟೀಲ ಅಧ್ಯಕ್ಷತೆ ವಹಿಸುವರು ಎಂದು ಮಾಹಿತಿ ನೀಡಿದರು.

> ಗದುಗಿನ ರಿಂಗ್ ರೋಡ್ ಸಮೀಪ ಹೆರಕಲ್ ಲೇಔಟ್‌ನಲ್ಲಿ 7 ಸಾವಿರ ಚದರ ಅಡಿ ವಿಸ್ತೀರ್ಣದ ಜಾಗದಲ್ಲಿ 3 ಸಾವಿರ ಚದರ ಅಡಿಯಲ್ಲಿ ದೊಡ್ಡ ಸಭಾಂಗಣ ಹೊಂದಿರುವ ಸುಸಜ್ಜಿತ ಕೇಂದ್ರವನ್ನು ನಿರ್ಮಾಣ ಮಾಡಲಾಗಿದೆ. ಈ ಕೇಂದ್ರದ ಮೂಲಕ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ನೂತನ ತಾಂತ್ರಿಕತೆಯ ಮಾಹಿತಿ ನೀಡುವ ಕೇಂದ್ರವಾಗಿ ರೂಪಿಸಲಾಗುವುದು ಎಂದು ಎಂ.ಸಿ. ಐಲಿ ವಿವರಿಸಿದರು.

▸▸ 3ನೇ ಪುಟಕ್ಕೆ

## ಮೈಸೂರು ಸ್ಯಾಂಡಲ್ ಗೆ ತಮನ್ನಾ ರಾಯಭಾರಿ: ನಟಿ ರಮ್ಯಾ ಅಸಮಾಧಾನ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮೈಸೂರ್ ಸ್ಯಾಂಡಲ್ ಸೋಪ್ ರಾಯಭಾರಿಯಾಗಿ ಬಹುಭಾಷಾ ನಟಿ ತಮನ್ನಾ ಅವರನ್ನು ಸರ್ಕಾರ ಆಯ್ಕೆ ಮಾಡಿದೆ. ನಟಿಯ ಆಯ್ಕೆ ಹಾಗೂ ಆಕೆಗೆ ನೀಡಲಾಗಿರುವ ದುಬಾರಿ ಸಂಭಾವನೆ ಕುರಿತು ಹಲವರು ಬೇಸರ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ಈ ನಡೆಗೆ ಕನ್ನಡ ಚಿತ್ರರಂಗದ ಕಲಾವಿದರೂ ಬೇಸರ ಹೊರಹಾಕಿದ್ದಾರೆ. ಅಂತೆಯೇ ಇದೀಗ ಕನ್ನಡ ಚಿತ್ರರಂಗದ ಖ್ಯಾತ ನಟಿ, ಮಾಜಿ ಸಂಸದೆ ರಮ್ಯಾ ಕೂಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇನ್ಸ್ಟಾಗ್ರಾಂನಲ್ಲಿ ಈ ಬಗ್ಗೆ ಸ್ಟೋರಿ ಹಂಚಿಕೊಂಡಿರುವ ನಟಿ ರಮ್ಯಾ, ಇಂದಿನ ಆಧುನಿಕ ಯುಗದಲ್ಲಿ, ಮಾಹಿತಿಯೊಂದನ್ನು ಜನರಿಗೆ ತಲುಪಿಸಲು ಹಲವು ವಿವಿಧ ಕ್ರಿಯಾಶೀಲ ದಾರಿಗಳಿವೆ. ಪ್ರಾಡಕ್ಟ್ ಒಂದನ್ನು ಜನರಿಗೆ ತಲುಪಿಸಲು ಅದಕ್ಕೆ ಸೆಲೆಬ್ರಿಟಿಯೊಬ್ಬರನ್ನು ಆಯ್ಕೆ ಮಾಡಿ ಅವರ ಮೂಲಕವೇ ಪ್ರಚಾರ ಮಾಡಬೇಕು ಎಂಬುದು ಬಹಳ ಹಳೆಯ ಮಾದರಿಯ ಯೋಜನೆ ಮಾತ್ರವಲ್ಲದೆ ಇದು ತೆರಿಗೆದಾರರ ಹಣವನ್ನು ಪೋಲು ಮಾಡಿದಂತೆ' ಎಂದಿದ್ದಾರೆ.

ಜನ ಇಂದು ಯಾರೋ ಸೆಲೆಬ್ರಿಟಿ ಪ್ರಚಾರ ಮಾಡಿದ್ದಾರೆ ಎಂಬ ಕಾರಣಕ್ಕೆ ಸೋಪನ್ನು ಖರೀದಿಸುವುದಿಲ್ಲ. ಅವರಿಗೆ ಚೆನ್ನಾಗಿ ಗೊತ್ತಿದೆ. ಆ ಸೋಪು ಬಳಸಿದರೆ ಪ್ರಚಾರ ಮಾಡಿದ ಸೆಲೆಬ್ರಿಟಿ ರೀತಿ ನಾನು ಆಗುವುದಿಲ್ಲ ಎಂದು. ಪ್ರಾಡೆಕ್ಟ್ ಚೆನ್ನಾಗಿದ್ದರೆ ಬಳಕೆದಾರರು ನಂಬಿಕಸ್ತ ಗ್ರಾಹಕರಾಗುತ್ತಾರೆ. ಮೈಸೂರು ಸ್ಯಾಂಡಲ್ ಎಂಬುದು ಒಂದೊಳ್ಳೆ ಪ್ರಾಡಕ್ಟ್ ಮಾತ್ರವೇ ಅಲ್ಲ, ಇತಿಹಾಸವನ್ನು ಹೊಂದಿರುವ ಪ್ರಾಡಕ್ಟ್ ಆಗಿದೆ. ಹಾಗಾಗಿ ಅದಕ್ಕೆ ಲಾಯಲ್ ಗ್ರಾಹಕರು ಇದ್ದಾರೆ' ಎಂದು ನಟಿ ರಮ್ಯಾ ಬರೆದುಕೊಂಡಿದ್ದಾರೆ.

## ಡಾನ್ಸ್ ಮಾಡುತ್ತೀರುವಾಗಲೇ ಹೃದಯಾಘಾತದಿಂದ ಯುವಕ ಸಾವು..!

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಇತ್ತೀಚಿಗೆ ಈ ಹೃದಯಾಘಾತ ಎನ್ನುವುದು ಸಾಮಾನ್ಯವಾಗಿದೆ. ಚಿಕ್ಕ ಮಕ್ಕಳಿಂದ, ವಯೋ ವೃದ್ಧರು ಸಹ ಈ ಒಂದು ಹಾರ್ಟ್ ಅಟ್ಯಾಕ್ ಗೆ ಬಲಿಯಾಗುತ್ತಿದ್ದಾರೆ. ಇದೀಗ ವಿಜಯಪುರ ನಗರದ ಚಪ್ಪರಬಂದ ಕಾಲೋನಿಯಲ್ಲಿ ಡಾನ್ಸ್ ಮಾಡುವಾಗಲೇ ಯುವಕನೊಬ್ಬ ಕುಸಿದು ಬಿದ್ದು ಸಾವನ್ನಪ್ಪಿರುವ ಘಟನೆ ನಡೆದಿದೆ.

ಮಹಮ್ಮದ್ ಪೈಗಂಬರ್ ಗಂಗನಹಳ್ಳಿ (28) ಮೃತ ದುರ್ದೈವಿಯಾಗಿದ್ದು, ಸಂಬಂಧಿಕರ ಮದುವೆಯಲ್ಲಿ ಡ್ಯಾನ್ಸ್ ಮಾಡುವಾಗ ಏಕಾಏಕಿ ಹೃದಯಾಘಾತಕ್ಕೊಳಗಾಗಿ ಕುಸಿದು ಬಿದ್ದಿದ್ದಾನೆ. ಕೂಡಲೇ ಯುವಕನನ್ನು ಆಸ್ಪತ್ರೆಗೆ ಸಾಗಿಸಲಾಯಿತಾದರೂ ಅಷ್ಟೊತ್ತಿಗಾಗಲೇ ಆತನ ಪ್ರಾಣಪಕ್ಷಿ ಹಾರಿಹೋಗಿತ್ತು. ಗೋಳಗುಮ್ಮಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಮಹಿಳೆಯರ ಜೀವನದ ಪಥ ಬದಲಿಸಬಲ್ಲ 'ಮಹಿಳಾ ದಿನಾಚರಣೆ' ಕಾರ್ಯಕ್ರಮ

## ಸ್ಫೂರ್ತಿಯ ಚಿಲುಮೆ ಮೀನಾಕ್ಷಿ ಕೃಷ್ಣಬೈರೇಗೌಡ

ಇತ್ತೀಚೆಗೆ ನನ್ನ ಎಂ.ಎಸ್. ಇಂಜಿನಿಯರಿಂಗ್ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ನನಗೆ ಈ ದಿನಾಚರಣೆ ಅತ್ಯಂತ ಅವಿಸ್ಮರಣೀಯವಾಗಿತ್ತು ಎಂಬುದು ವಿಶೇಷ. ನಮ್ಮ ವಿದ್ಯಾಸಂಸ್ಥೆಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಸಿಜಿಐ ಇನ್ಫರ್ಮೇಶನ್ ಸಿಸ್ಟಮ್ಸ್‌ನ ಉಪಾಧ್ಯಕ್ಷೆ ಹಾಗೂ ಸಮಾಜ ಸೇವೆಯಲ್ಲಿ ಸಕ್ರಿಯವಾಗಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಶ್ರೀಮತಿ ಮೀನಾಕ್ಷಿ ಕೃಷ್ಣಬೈರೇಗೌಡ ಅವರ ಪ್ರೇರಣಾದಾಯಕ ಭಾಷಣವನ್ನು ಕೇಳುವ ಸುವರ್ಣಾವಕಾಶವ ನನಗೆ ಒದಗಿತು.



ಅವರ ಭಾಷಣವು ಉನ್ನತ ಗುರಿಗಳನ್ನು ಹೊಂದಿರುವ ಯುವತಿಯರಿಗಾಗಿ ಪ್ರಜ್ವಲಿತ ದೀಪದಂತಿತ್ತು ಎನ್ನಬಹುದು. ಅವರು ತಮ್ಮ ಭಾಷಣದಲ್ಲಿ, ಲಿಂಗ ಸಮಾನತೆ ಎಂದರೆ ಕೇವಲ ಮಹಿಳೆಯರು ಮತ್ತು ಪುರುಷರು ಒಂದೇ ರೀತಿಯ ಹಕ್ಕುಗಳನ್ನು ಹೊಂದಿದ್ದಾರೆ ಎಂದು ಖಚಿತಪಡಿಸಿಕೊಳ್ಳುವುದು ಅಷ್ಟೇ ಅಲ್ಲ. ಶಿಕ್ಷಣ, ಕೆಲಸ ಮತ್ತು ಜೀವನದಲ್ಲಿ ಮಹಿಳೆಯರು ಮತ್ತು ಪುರುಷರು ಸಮಾನ ಅವಕಾಶಗಳನ್ನು ಪಡೆದಾಗ, ಜಗತ್ತು ಎಲ್ಲರಿಗೂ ಉತ್ತಮ ಸ್ಥಳವಾಗುತ್ತದೆ ಎಂದು ಹೇಳಿದರು.

ನಮ್ಮ ದೇಶ ಪ್ರಗತಿ ಸಾಧಿಸುತ್ತಿದ್ದರೂ, ಮಹಿಳೆಯರು ಇನ್ನೂ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅದರಲ್ಲೂ ವಿಶೇಷವಾಗಿ ಕೆಲಸದ ಸ್ಥಳಗಳಲ್ಲಿ, ರಾಜಕೀಯ ಮತ್ತು ಸಾಮಾಜಿಕ ಜೀವನದಂತಹ ಕ್ಷೇತ್ರಗಳಲ್ಲಿ ಮಹಿಳೆಯರು ಹಿಂದೆ ಉಳಿದಿದ್ದಾರೆ. ಸಂಸ್ಥೆಗಳಲ್ಲಿ ಮಹಿಳೆಯರು ಮತ್ತು ಪುರುಷರು ತತ್ಸಮಾನ ಹುದ್ದೆ ಹೊಂದಿದ್ದರೂ, ಮಹಿಳೆಯರು ಮಾತ್ರ ಪುರುಷರಿಗಿಂತ ಕಡಿಮೆ ಸಂಬಳ ಪಡೆಯುತ್ತಲೇ ಇದ್ದಾರೆ. ಇದು ಸರಿಯಲ್ಲ. ಎಲ್ಲರಿಗೂ, ಹುದ್ದೆಗೆ ಅನುಸಾರವಾಗಿ ಸಮಾನ ವೇತನ ದೊರೆಯಬೇಕು, ಇದಕ್ಕೆ ಸೂಕ್ತವಾದ ನ್ಯಾಯ ದೊರಕಬೇಕು. ಲಿಂಗ ಸಮಾನತೆ ಎಂಬುದು ಎಲ್ಲರಿಗೂ ಪ್ರಯೋಜನವನ್ನು ನೀಡುತ್ತದೆ. ಕೆಲಸದ ಸ್ಥಳದಲ್ಲಿ, ಮನೆಯಲ್ಲಿ ಅಥವಾ ಸಮುದಾಯದಲ್ಲಿ, ಪುರುಷರು ತಮ್ಮ ಸವಲತ್ತುಗಳನ್ನು ಬಳಸಿಕೊಂಡು ಮಹಿಳೆಯ ಧ್ವನಿಗೆ ಓಗೊಡಬೇಕು ಮತ್ತು ಹೆಚ್ಚು ಸಮತೋಲಿತ ಪ್ರಪಂಚದತ್ತ ಕೆಲಸ ಮಾಡಬೇಕು ಎಂಬ ಅವರ ಮಾತು ಸತ್ಯವೆನಿಸಿತು.

ನಮ್ಮ ದೇಶದಲ್ಲಿ, ಮಹಿಳೆಯರು ಇನ್ನೂ ಶಿಕ್ಷಣ ಮತ್ತು ಆರೋಗ್ಯ ಸೇವೆಯನ್ನು ಪಡೆಯಲು ಹೆಣಗಾಡುತ್ತಿದ್ದಾರೆ. ಕೆಲವು ಗೊಡ್ಡು ಸಂಪ್ರದಾಯಗಳು ಈಗಿನ ದಿನಮಾನಗಳಲ್ಲೂ ಮಹಿಳೆಯ ಸ್ವತಂತ್ರಕ್ಕೆ ಮತ್ತು ಸಾಧನೆಗೆ ಅಡ್ಡಿಯಾಗಿವೆ ಎಂದರು. ಭಾರತದಲ್ಲಿ ಮಹಿಳೆಯರು ಉದ್ಯೋಗಕ್ಕೆ ಹೋಗುತ್ತಿರುವದರ ಬಗ್ಗೆ ಕೆಲವೊಂದು ಪ್ರಮುಖ ಅಂಕಿಅಂಶಗಳನ್ನು ಮೀನಾಕ್ಷಿ ಕೃಷ್ಣಬೈರೇಗೌಡ ಹಂಚಿಕೊಂಡರು: ನಮ್ಮ ದೇಶದಲ್ಲಿ ನೂರಕ್ಕೆ ಕೇವಲ ಶೇ. 32.7 ಮಹಿಳೆಯರು ಮಾತ್ರ ಉದ್ಯೋಗದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಇನ್ನುಳಿದ ಮಹಿಳೆಯರು ಅಡುಗೆ ಮನೆಗೆ ಸೀಮಿತರಾಗಿದ್ದರೆ. ಇದಲ್ಲದೆ, ಶಿಕ್ಷಣದಲ್ಲಿ ಮುಂಚೂಣಿಯಲ್ಲಿ ಮಹಿಳೆಯರು ಉತ್ತೀರ್ಣರಾದರೂ ಕೇವಲ ಶೇ. 38.5 ಮಹಿಳೆಯರು ಮಾತ್ರ ಉದ್ಯೋಗಕ್ಕೆ ಹೋಗುತ್ತಿದ್ದಾರೆ ಎಂದು ಬೇಸರವನ್ನೂ ವ್ಯಕ್ತಪಡಿಸಿದರು.

ಈ ಅಂಕಿಅಂಶಗಳು ಕೇವಲ ಸಂಖ್ಯೆಗಳಲ್ಲ; ಮಹಿಳೆಯರ ಹಕ್ಕುಗಳು, ಕುಟುಂಬದ ನಿರೀಕ್ಷೆಗಳು ಹಾಗೂ ಸಮಾಜದ ಮನೋಭಾವನೆಗಳ ಸ್ಪಷ್ಟ ಚಿತ್ರಣವಾಗಿದೆ ಎಂಬ ಅವರ ನುಡಿಗಳು ಎಲ್ಲರ ಕಣ್ಣು ತೆರೆಸಿತು. ವಿದ್ಯಾರ್ಥಿಗಳು ಮಹಿಳಾ ದಿನದಂದು ಮೂರು ಘಟ್ಟಗಳಲ್ಲಿ ಚಿಂತನೆ ನಡೆಸಬೇಕು. ಒಂದು, ವೈಯಕ್ತಿಕ ಮಟ್ಟದ ಬೆಳವಣಿಗೆ, ಎರಡು, ಕುಟುಂಬದ ಹಿತಚಿಂತನೆ ಹಾಗೂ ಮೂರು, ದೇಶದ ಉನ್ನತಿಗಾಗಿ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳುವುದು ಹಾಗೂ ಸಮಾಜದಲ್ಲಿ ಧನಾತ್ಮಕ ಬೆಳವಣಿಗೆಯನ್ನು ಮೂಡಿಸುವುದು.

ಈ ವಿಷಯಗಳಲ್ಲಿ ಪ್ರತಿಭಟನೆ, ಸಂಘಟನೆ, ಹೋರಾಟ ಅನಿವಾರ್ಯವಾಗಬಾರದು. 2025ರ ಅಂತಾರಾಷ್ಟ್ರೀಯ ಮಹಿಳಾ ದಿನವು ಲಿಂಗ ಸಮಾನತೆಯನ್ನು ಸಾಧಿಸುವುದಕ್ಕೆ ಹಾಗು ಮಹಿಳೆಯ ಸುಸ್ಥಿರ ಭವಿಷ್ಯಕ್ಕೆ ಹೇಗೆ ಕೊಡುಗೆ ನೀಡುತ್ತದೆ ಎಂಬುದನ್ನು ಎತ್ತಿ ತೋರಿಸುತ್ತದೆ. ಮಹಿಳೆಯನ್ನು ಸಬಲೀಕರಣಗೊಳಿಸುವುದು ಎಂದರೆ ಪ್ರಮುಖವಾಗಿ ರಾಜಕೀಯ, ವಿಜ್ಞಾನ, ಶಿಕ್ಷಣ ಮತ್ತು ಕಲೆಗಳ ಕ್ಷೇತ್ರಗಳಲ್ಲಿ ಸಮಾನ ಅವಕಾಶ ನೀಡುವುದಾಗಿದೆ. ಮಹಿಳೆಗೆ ತನ್ನ ಕೆಲಸದ ಮೂಲಕ ಸಮಾಜಕ್ಕೆ ಅರ್ಥಪೂರ್ಣ ಕೊಡುಗೆ ನೀಡಲು ಸರಿಯಾದ ಅವಕಾಶಗಳನ್ನು ನೀಡುವುದುದಾಗಿದೆ.

ಮಹಿಳೆಯರಿಗೆ ಈ ಮೇಲಿನ ಕ್ಷೇತ್ರಗಳಲ್ಲಿ ಸಮಾನ ಪ್ರವೇಶವಿದ್ದಾಗ, ಪ್ರಗತಿಯನ್ನು ಸಾಧಿಸಲು ಸಾಧ್ಯ ಮತ್ತು ಸಂಕೀರ್ಣ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯ ಹಾಗು ಸಮೃದ್ಧ ಜಗತ್ತನ್ನು ಸೃಷ್ಟಿಸಲು ಸಾಧ್ಯ ಎಂಬುದು ಅಕ್ಷರಶಃ ಸತ್ಯ. ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜಕೀಯ ಜೀವನದಲ್ಲಿ ಮಹಿಳೆಯರ ಸಾಧನೆಗಳನ್ನು ಎಲ್ಲರೂ ಗೌರವಿಸಬೇಕು. ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಲಿಂಗ ಸಮಾನತೆಗಾಗಿ ವಿದ್ಯಾರ್ಥಿಗಳು ಹೋರಾಡಬೇಕು. ವೇತನ ಅಂತರ, ಅಧಿಕಾರದ ಸ್ಥಾನಗಳಲ್ಲಿ ಕಡಿಮೆ ಪ್ರಾತಿನಿಧ್ಯ ಮತ್ತು ಶಿಕ್ಷಣದ ಪ್ರವೇಶದಂತಹ ನಡೆಯುತ್ತಿರುವ ಅಸಮಾನತೆಗಳನ್ನು ವಿದ್ಯಾರ್ಥಿಗಳು ಬೆಳಕಿಗೆ ತಂದು ಸಮ್ಯಸೆಗಳನ್ನು ಬಗೆಹರಿಸಿ ಎಂದು ಕರೆಕೊಟ್ಟರು.

ಈ ನುಡಿಗಳು ನಮ್ಮ ಕನಸುಗಳಿಗೆ ಸ್ಫೂರ್ತಿಯ ಬೆಳಕು ನೀಡಿದಂತೆ ಮತ್ತು ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿದಂತೆ ಅನುಭವವಾಯಿತು. ಅವರ ಮಾತುಗಳಲ್ಲಿ ಅಪಾರ ಪ್ರತಿಭೆ, ಸಹನೆ, ಶ್ರಮ ಮತ್ತು ನಿಷ್ಠೆಯ ಮಹತ್ವವಿತ್ತು. ಅವರು ತಮ್ಮ ಜೀವನ ಪಯಣವನ್ನು ಹಂಚಿಕೊಳ್ಳುವಾಗ ನಾವು ಅದನ್ನು ಅತ್ಯಂತ ಗಮನವಿಟ್ಟು ಕೇಳಿದೆವು. ಅವರು ಹೇಗೆ ಒಂದು ಸಾಮಾನ್ಯ ಹಿನ್ನಲೆಯಿಂದ ಬಂದು ಇಂದು ಯಶಸ್ಸಿನ ಶಿಖರದಲ್ಲಿ ನಿಂತಿದ್ದಾರೋ ಎಂಬುದು ನಮ್ಮಲ್ಲಿ ಪ್ರಭಾವಾಶಾಲಿಯಾಗಿ ಬೇರೂರಿತು.

ನನಗೆ ಮತ್ತು ನನ್ನಂತಹ ಹಲವರಿಗೆ ಈ ಕಾರ್ಯಕ್ರಮ ಕೇವಲ ಒಂದು ಭಾಷಣವಾಗಿರಲಿಲ್ಲ. ಇದು ನಮ್ಮ ಆತ್ಮವಿಶ್ವಾಸ ಹೆಚ್ಚಿಸಿಕೊಳ್ಳುವ ಪ್ರೇರಣಾದಾಯಕ ಮಾತಗಳಾಗಿದ್ದವು. ಈ ಭಾಷಣವು ಅನುಮಾನ ಮತ್ತು ಅಂಜಿಕೆಯ ಅಡಚಣೆಯನ್ನು ತೆಗೆದುಹಾಕಿ, ತಮ್ಮೊಳಗಿನ ಶಕ್ತಿ ಮತ್ತು ಗುರಿಗಳನ್ನು ಎಚ್ಚರಿಸಿಕೊಳ್ಳಲು, ನಮ್ಮೆಲ್ಲರ ಜೀವನದಲ್ಲಿ ಬದಲಾವಣೆ ತರಲು ಪ್ರೇರಣೆಯಾದ ಶಕ್ತಿಯಾಯಿತು. ಈ ಭಾಷಣವು ನಮಗೆ ನಮ್ಮ ಹಕ್ಕುಗಳು ಮತ್ತು ಗುರಿಗಳಿಗಾಗಿ ಧೈರ್ಯದಿಂದ ಮುಂದೆ ಹೆಜ್ಜೆ ಇಡುವ ಶಕ್ತಿಯನ್ನು ನೀಡಿತು.



**– ಶಿಲ್ಪಾ ಎಂ.ಎಸ್.**
ಇಂಜಿನಿಯರಿಂಗ್ ವಿದ್ಯಾರ್ಥಿನಿ,
ಬೆಂಗಳೂರು.

### ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನಲ್ಲಿ ವಿಭಾಗ ಮಟ್ಟದ ಸ್ಲಂ ಜನರ ಬೃಹತ್ ಸಮಾವೇಶ

## 'ಸಾಂಸ್ಕೃತಿಕ ಹಬ್ಬ' ಮೇ.28ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಲಂ ಜನಾಂದೋಲನ ಕರ್ನಾಟಕ, ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆ ಹಾಗೂ ಗದಗ ಜಿಲ್ಲಾ ಕೊಳಚೆ ನಿವಾಸಿಗಳ ಹಿತರಕ್ಷಣ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವಿಭಾಗ ಮಟ್ಟದ ಸ್ಲಂ ಜನರ ಬೃಹತ್ ಸಮಾವೇಶ ಹಾಗೂ ಸಾಂಸ್ಕೃತಿಕ ಹಬ್ಬವನ್ನು ಮೇ 28ರಂದು ಬೆಳಗ್ಗೆ 11 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಗದಗ ಜಿಲ್ಲಾ ಸ್ಲಂ ನಿವಾಸಿಗಳ ಹಿತರಕ್ಷಣಾ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಮಾನ್ವಿ ಮಾಹಿತಿ ನೀಡಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ವಿಶೇಷ ಆಹ್ವಾನಿತರಾಗಿ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ



ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಸ್ಲಂ ಹಬ್ಬ ಕಾರ್ಯಕ್ರಮಕ್ಕೆ ಕಾರ್ಮಿಕ ಸಚಿವ ಸಂತೋಷ ಲಾಡ್ ಚಾಲನೆ ನೀಡುವರು. ಸ್ಲಂ ಜನಾಂದೋಲನ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ಹುಬ್ಬಳ್ಳಿ ಶಾಸಕ ಪ್ರಸಾದ ಅಬ್ಬಯ್ಯ, ಹಾವೇರಿ-ಗದಗ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಆಗಮಿಸುವರು ಎಂದು ಇಮ್ತಿಯಾಜ್ ಮಾನ್ವಿ ಮಾಹಿತಿ ನೀಡಿದರು.

ರಾಜಾರಾಮ್ ಪವಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪುತ್ತಾರ, ಕನ್ನಡಪ್ರಭ ಪ್ರಧಾನ ವರದಿಗಾರ ಶಿವಕುಮಾರ ಕುಷ್ಟಗಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಾರ್ಯಪಾಲಕ ಅಭಿಯಂತರ ಪ್ರವೀಣ್ ಹೊಂಗನಹಳ್ಳಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಗದಗ ಉಪ ವಿಭಾಗದ ಅಭಿಯಂತರ ಮಂಜುನಾಥ, ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ವೆಂಕಟೇಶಯ್ಯ, ಪ್ರಗತಿಪರ ಚಿಂತಕ ಸತೀಶ್ ಪಾಶಿ, ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆಯ ಸಂಚಾಲಕಿ ಶೋಭಾ ಕಮತರ್, ವಿಜಯಪುರ ಜಿಲ್ಲಾ ಸಂಚಾಲಕಿ ವೆಂಕಮ್ಮ, ಬಸವರಾಜ ಪೂಜಾರ ಸೇರಿದಂತೆ ಅನೇಕ ಗಣ್ಯರು ಆಗಮಿಸುವರು ಎಂದರು.

ಈ ಸಂದರ್ಭದಲ್ಲಿ ಅಶೋಕ ಕುಡತಿನ್ನಿ, ಇಬ್ರಾಹಿಂ ಮುಲ್ಲಾ, ವೆಂಕಮ್ಮ ಹೊಸಪೇಟೆ, ಅಶೋಕ ಕುಸುಬಿ, ಶೋಬಾ ಹುಬ್ಬಳ್ಳಿ, ಪರವೀನ್ ಬಾನು ಹವಾಲ್ದಾರ್, ಖಾಜಾಸಾಬ್ ಇಸ್ಮಾಯಿಲ್ ನವರ, ಶರಣಪ್ಪ ಸೂಡಿ, ಮೆಹಬೂಬ್ ಸಾಬ್ ಬಳ್ಳಾರಿ ಮುಂತಾದವರು ಹಾಜರಿದ್ದರು.

### ಹೊಸ ಚರ್ಚೆ ಹುಟ್ಟು ಹಾಕಿದ ವೈರಲ್ ಪತ್ರ...


## ತೆಲಂಗಾಣದಲ್ಲಿ ಬಿಆರ್‌ಎಸ್-ಬಿಜೆಪಿ ಮೈತ್ರಿ..?

**■ವಿಜಯಸಾಕ್ಷಿ ಸುದ್ದಿ, ತೆಲಂಗಾಣ**

ತೆಲಂಗಾಣದ ಮಾಜಿ ಮುಖ್ಯಮಂತ್ರಿ ಹಾಗೂ ಬಿಆರ್‌ಎಸ್ ಪಕ್ಷದ ನಾಯಕ ಕೆ.ಚಂದ್ರಶೇಖರ್ ರಾವ್ (ಕೆಸಿಆರ್) ಅವರಿಗೆ ಮಗಳು ಕೆ.ಕವಿತಾ ಅವರು ಬರೆದಿದ್ದಾರೆ ಎನ್ನಲಾದ ಪತ್ರವೊಂದು ವೈರಲ್ ಆಗಿದ್ದು, ರಾಜ್ಯದಲ್ಲಿ ಹೊಸ ರಾಜಕೀಯ ಚರ್ಚೆಯನ್ನು ಹುಟ್ಟು ಹಾಕಿದೆ.

ತೆಲಂಗಾಣದಲ್ಲಿ ಬಿಜೆಪಿ ಜೊತೆ ಬಿಆರ್‌ಎಸ್ ಮೈತ್ರಿ ಮಾಡಿಕೊಳ್ಳಲಿದೆ ಎಂಬ ಊಹಾಪೋಹಗಳು ದಟ್ಟವಾಗಿ ಹರಡಿತ್ತು. ಈ ನಡುವೆ ಕವಿತಾ ಅವರದ್ದು ಎನ್ನಲಾದ ಪತ್ರದ ಕೆಲವೊಂದು ಅಂಶಗಳು ಸಂಚಲನ ಸೃಷ್ಟಿಸಿದೆ. ವೈರಲ್ ಪತ್ರದ ನೈಜತೆ ಇನ್ನೂ ದೃಢಪಡದಿದ್ದರೂ, ಈ ಕುರಿತು ಕವಿತಾರ ಕಚೇರಿಯಾಗಲಿ ಅಥವಾ ಕೆ.ಚಂದ್ರಶೇಖರ್ ಅವರಿಂದಾಗಲಿ ಇದುವರೆಗೆ ಯಾವುದೇ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ.





"ನೀವು (ಕೆಸಿಆರ್) ಕೇವಲ ಎರಡು ನಿಮಿಷಗಳ ಕಾಲ ಮಾತನಾಡಿದರೂ, ಭವಿಷ್ಯದಲ್ಲಿ ಬಿಜೆಪಿ ಜೊತೆ ಮೈತ್ರಿ ಏರ್ಪಡುತ್ತದೆ ಎಂದು ಕೆಲವರು ಊಹಿಸಲು ಪ್ರಾರಂಭಿಸಿದ್ದಾರೆ. ನೀವು (ಬಿಜೆಪಿ ವಿರುದ್ಧ) ಇನ್ನೂ ಬಲವಾಗಿ ಮಾತನಾಡಬೇಕಿತ್ತು ಎಂದು ನಾನು ವೈಯಕ್ತಿಕವಾಗಿ ಭಾವಿಸಿದ್ದೇನೆ. ಬಹುಶಃ ನಾನು (ಬಿಜೆಪಿಯಿಂದಾಗಿ) ತೊಂದರೆ ಅನುಭವಿಸಿದ್ದರಿಂದ ಹಾಗೆ ಅನಿಸಿರಬಹುದು. ಆದರೆ, ನೀವು ಬಿಜೆಪಿಯನ್ನು ಇನ್ನೂ ಸ್ವಲ್ಪ ಹೆಚ್ಚು ಗುರಿಯಾಗಿಸಿಕೊಳ್ಳಬೇಕಿತ್ತು ಅಪ್ಪಾ" ಎಂದು ಕವಿತಾ ಅವರು ತಂದೆಗೆ ಬರೆದಿದ್ದಾರೆ ಎನ್ನಲಾದ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

"ಹಿಂದುಳಿದ ವರ್ಗಗಳಿಗೆ ಶೇ.42ರಷ್ಟು ಮೀಸಲಾತಿ, ಪರಿಶಿಷ್ಟ ಜಾತಿ ಒಳ ಮೀಸಲಾತಿ, ವಕ್ಫ್ ತಿದ್ದುಪಡಿ ಕಾಯ್ದೆ ಮತ್ತು ತಮ್ಮ ಭಾಷಣದಲ್ಲಿ ಉರ್ದು ಭಾಷೆಯನ್ನು ಕೈಬಿಟ್ಟಿರುವುದು ಮುಂತಾದ ಪ್ರಮುಖ ವಿಷಯಗಳ ಕುರಿತು ಸಭೆಯಲ್ಲಿ ನೀವು (ಕೆಸಿಆರ್) ಮೌನ ವಹಿಸಿರುವುದು ನಕಾರಾತ್ಮಕ ಪ್ರತಿಕ್ರಿಯೆಗೆ ಕಾರಣ" ಎಂದು ಪತ್ರದಲ್ಲಿ ಹೇಳಲಾಗಿದೆ.

### ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ 'ಟಿವಿ ಸುದ್ದಿ ಬರವಣಿಗೆ' ಕಾರ್ಯಾಗಾರ

## ಪ್ರತಿ ಪದವೂ ಅರ್ಥಪೂರ್ಣವಾಗಿರಬೇಕು

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಪ್ರಖರತೆ ಮತ್ತು ಸ್ಪಷ್ಟತೆ ಇರುವ ಬರವಣಿಗೆಯೇ ಜನರ ವಿಶ್ವಾಸ ಗಳಿಸುವುದರಲ್ಲಿ ಸಹಾಯಕವಾಗುತ್ತದೆ ಎಂದು ಮಹಿಳಾ ವಿವಿಯ ಐಕ್ಯೂಎಸಿ ನಿರ್ದೇಶಕ ಪ್ರೊ. ಪಿ.ಜಿ. ತಡಸದ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ವುಮೆನ್ ಮೀಡಿಯಾ ಕ್ಲಬ್ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ 'ಟಿವಿ ಸುದ್ದಿ ಬರವಣಿಗೆ' ಎಂಬ ವಿಷಯದ ಕುರಿತು ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸುದ್ದಿಯನ್ನು ಜನರ ಹೃದಯಕ್ಕೆ ನೇರವಾಗಿ ತಲುಪಿಸುವುದು ಟಿವಿ ಮಾಧ್ಯಮದ ಮುಖ್ಯ ಉದ್ದೇಶವಾಗಿದೆ. ಅದಕ್ಕಾಗಿ ಬಳಸುವ ಭಾಷೆ ಸರಳ, ಸ್ಪಷ್ಟ ಮತ್ತು ಆಕರ್ಷಕವಾಗಿರಬೇಕು. ಪ್ರತಿ ಪದವೂ ಅರ್ಥಪೂರ್ಣವಾಗಿದ್ದು, ಜನರ ಮನಸ್ಸಿನಲ್ಲಿ ಪ್ರಭಾವ ಬೀರುವಂತೆ ಇರಬೇಕು. ಭಾಷೆಯ ಶೈಲಿ ಮೃದು, ಸಂವೇದನಾಶೀಲ ಹಾಗೂ ನೈತಿಕ ಮೌಲ್ಯಗಳನ್ನು ಪ್ರತಿಬಿಂಬಿಸುವಂತಿರಬೇಕು ಎಂದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ ಕಾಕಡೆ ಮಾತನಾಡಿ, ಟಿವಿ ಬರವಣಿಗೆ ಇಂದು ದೊಡ್ಡ ಸವಾಲಾಗಿ ರೂಪುಗೊಂಡಿದೆ. ಏಕೆಂದರೆ ಪ್ರತಿ ಕ್ಷಣವೂ ತ್ವರಿತವಾಗಿ ಬದಲಾಗುತ್ತಿರುವ ಲೋಕದಲ್ಲಿ ನಿಖರವಾದ, ಸ್ಪಷ್ಟವಾದ ಮತ್ತು ಆಕರ್ಷಕ ಸುದ್ದಿಯನ್ನು ತಲುಪಿಸುವ ಹೊಣೆಗಾರಿಕೆ ಮಾಧ್ಯಮದ ಮೇಲೆ ಇದೆ. ಈ ಸವಾಲನ್ನು ಯಶಸ್ವಿಯಾಗಿ ನಿಭಾಯಿಸಲು ಭಾಷಾ ಕೌಶಲಗಳನ್ನು ಬೆಳೆಸಿಕೊಳ್ಳುವುದು ಅಗತ್ಯವಾಗಿದೆ. ಪರಿಣಾಮಕಾರಿಯಾದ ಬರವಣಿಗೆ ಮಾತ್ರವೇ ಪ್ರೇಕ್ಷಕರ ಗಮನ ಸೆಳೆಯಲು ಮತ್ತು ಸತ್ಯಸ್ಥಿತಿಯನ್ನು ಸರಿಯಾಗಿ ಪ್ರಸ್ತುತಪಡಿಸಲು ನೆರವಾಗುತ್ತದೆ ಎಂದರು.

ಕಾರ್ಯಾಗಾರದಲ್ಲಿ ಬೆಂಗಳೂರಿನ ನ್ಯೂಸ್ ಫಸ್ಟ್ ಕನ್ನಡ ವಾಹಿನಿಯ ಸೀನಿಯರ್ ಕಾಪಿ ಎಡಿಟರ್ ಪೂರ್ಣಿಮಾ ಹೀರೆಮಠ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ತಹಮೀನಾ ಕೋಲಾರ, ಸಂದೀಪ ನಾಯಕ, ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು, ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಹಾಗೂ ಸ್ನಾತಕೋತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಕಾರ್ಯಾಗಾರದಲ್ಲಿ ಸಂಶೋಧನಾ ವಿದ್ಯಾರ್ಥಿನಿಯರಾದ ಸುಷ್ಮಾ ಪವಾರ ಸ್ವಾಗತಿಸಿದರು. ಪವಿತ್ರಾ ಕಂಬಾರ ಅತಿಥಿಯರನ್ನು ಪರಿಚಯಿಸಿದರು. ಪಿಲೋಮಿನಾ ನಿರೂಪಿಸಿದರು ಹಾಗೂ ಜಯಶ್ರೀ ತಳವಾರ ವಂದಿಸಿದರು.

### ಜನೌಷಧಿ ಕೇಂದ್ರಗಳ ಮೇಲೆ ರಾಜ್ಯ ಸರಕಾರ ಕೆಂಗಣ್ಣು

## ಬಡವರ ಮೇಲೆ ಮತ್ತೊಂದು ಬರೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರಿ ಆಸ್ಪತ್ರೆಗಳ ಆವರಣದಲ್ಲಿರುವ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ಬಂದ್ ಮಾಡಲು ರಾಜ್ಯ ಸರಕಾರ ಆದೇಶ ನೀಡಿದ್ದು, ಬಹುತೇಕ ಬಡ ಮತ್ತು ಸಾಮಾನ್ಯ ವರ್ಗದವರಿಗೆ ಅನೂಕೂಲವಾಗಿದ್ದ ಜನೌಷಧಿ ಕೇಂದ್ರಗಳ ಮೇಲೆ ರಾಜ್ಯ ಸರಕಾರ ಕೆಂಗಣ್ಣು ಬೀರಿದೆ. ರಿಯಾಯತಿ ದರದಲ್ಲಿ ಅಗತ್ಯ ಔಷಧಿ ದೊರಕುತ್ತಿದ್ದ ಜನೌಷಧಿ ಕೇಂದ್ರಗಳನ್ನು ಬಂದ್ ಮಾಡುವ ನಿರ್ಧಾರ ಸಾಮಾನ್ಯ ಜನರಿಗೆ ನೋವು ತರುವ ಸಂಗತಿಯಾಗಿದೆ.

ಪ್ರಧಾನಿ ಮೋದಿಯವರ ನೇತೃತ್ವದ ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಜನೌಷಧಿ ಕೇಂದ್ರಗಳನ್ನು ರಾಜ್ಯ ಸರಕಾರ ಸರಕಾರಿ ಆಸ್ಪತ್ರೆ ಆವರಣದಿಂದ ಬೇರಡೆ ಸ್ಥಳಾಂತರಿಸಲು ಹೊರಟಿರುವದು ಟೀಕೆಗೆ ಕಾರಣವಾಗಿದೆ. ಬಡವರಿಗೆ, ಸಾಮಾನ್ಯ ಜನರಿಗೆ ಔಷಧಿ ಖರೀದಿಯಲ್ಲಿ ಶೇ. 50-75ರಷ್ಟು ಉಳಿತಾಯವಾಗುತ್ತಿದ್ದ ಈ ಜನೌಷಧಿ ಕೇಂದ್ರಗಳು ಬಹಳಷ್ಟು ಜನರಿಗೆ ಅನೂಕೂಲವಾಗಿದ್ದವು. ಅಲ್ಲದೆ ಅನೇಕ ನಿರುದ್ಯೋಗಿ ವೈದ್ಯಕೀಯ ರಂಗದ ಪದವೀಧರರಿಗೆ ಇದು ಉದ್ಯೋಗ ನೀಡಿತ್ತು.




ಸರಕಾರಿ ಆಸ್ಪತ್ರೆಗಳ ಆವಣದಲ್ಲಿರುವ ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವದರಿಂದ, ಉತ್ತಮ ಗುಣಮಟ್ಟದ ಜನರಿಕ್ ಔಷಧಿಗಳನ್ನು ಕಡಿಮೆ ಹಾಗೂ ಕೈಗೆಟುಕುವ ದರಕ್ಕೆ ಸಾಮಾನ್ಯ ಮತ್ತು ಬಡ ಜನರಿಗೆ ದೊರಕಿಸುತ್ತಿರುವ ಕೇಂದ್ರ ಸರಕಾರದ ಉದ್ದೇಶಕ್ಕೆ ರಾಜ್ಯ ಸರಕಾರ ಅಡ್ಡಿಪಡಿಸಿದಂತಾಗುತ್ತದೆ. ಕೂಡಲೇ ರಾಜ್ಯ ಸರಕಾರ ಹೊರಡಿದ ಈ ಆದೇಶವನ್ನು ರದ್ದುಗೊಳಿಸಬೇಕು.

**– ಡಾ. ಚಂದ್ರು ಲಮಾಣಿ**
ಶಾಸಕರು.

ನಿರಂತರವಾಗಿ ಬಿಪಿ, ಶುಗರ್, ಕ್ಯಾನ್ಸರ್, ಹೃದಯ ಖಾಯಿಲೆ ಹೀಗೆ ಅನೇಕ ರೋಗಗಳಿಗೆ ಪ್ರಧಾನಮಂತ್ರಿ ಜನೌಷಧಿ ಕೇಂದ್ರದಲ್ಲಿ ಕಡಿಮೆ ದರದಲ್ಲಿ ಗುಣಮಟ್ಟದ ಔಷಧಿ ದೊರೆಯುತ್ತಿದ್ದರಿಂದ ಬಹುತೇಕ ಜನರು ಇದರ ಮೇಲೆ ಅವಲಂಬಿತರಾಗಿದ್ದರು. ಸರಕಾರಿ ಆಸ್ಪತ್ರೆ ವೈದ್ಯರು ಬರೆದುಕೊಡುವ ಮಾತ್ರೆಗಳು ಅವರಣದಲ್ಲಿ ಇದ್ದ ಜನೌಷಧಿ ಕೇಂದ್ರದಲ್ಲಿ ರಿಯಾಯತಿ ದರದಲ್ಲಿ ದೊರಕುತ್ತಿದ್ದವು. ಆದರೆ ಇದೀಗ ಸರಕಾರ ಏಕಾಏಕಿ ಈ ಆದೇಶ ನೀಡಿರುವದು ಎಷ್ಟು ಸರಿ, ಇದು ಬಡವರ ಮೇಲೆ ರಾಜ್ಯ ಸರಕಾರ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ಸಾರ್ವಜನಿಕರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

## ಅದ್ದೂರಿಯಾಗಿ ಜರುಗಿದ ಉರುಸು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಮೂರು ದಿನಗಳಿಂದ ನರೇಗಲ್ಲದಲ್ಲಿ ಜರುಗಿದ ಉರುಸು ಕಾರ್ಯಕ್ರಮವು ಅದ್ದೂರಿಯಾಗಿ ಸಂಪನ್ನಗೊಂಡಿತು. ಈ ನಿಮಿತ್ತ ಜರುಗಿದ ಮಂಜೂರ ಹುಸೇನ್‌ಶಾವಲಿಯುವರ ಮೆರವಣಿಗೆಯು ಭಕ್ತರೆಲ್ಲರ ಮನ ಸೂರೆಗೊಂಡಿತು.

ದರ್ಗಾದಿಂದ ಪ್ರಾರಂಭವಾದ ಉರುಸಿನ ಮೆರವಣಿಗೆಯು ಮಾರುತಿ ದೇವಸ್ಥಾನ, ಗಜಾನನ ದೇವಸ್ಥಾನ, ದ್ಯಾಮವ್ವನ ದೇವಸ್ಥಾನ, ಕೊಂತಿಮಲ್ಲಪ್ಪನ ದೇವಸ್ಥಾನ, ಪಟ್ಟಣ ಪಂಚಾಯತ, ದುರ್ಗಾ ಸರ್ಕಲ್, ಜಕ್ಕಲಿ ಕ್ರಾಸ್, ಹಳೆ ಬಸ್ ನಿಲ್ದಾಣ, ಮಾರೆಮ್ಮ ದೇವಸ್ಥಾನದ ಮೂಲಕ ಮರಳಿ ದರ್ಗಾಕ್ಕೆ ತಲುಪಿತು. ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮಗಳ ಸಾವಿರಾರು ಜನ ಭಕ್ತಾದಿಗಳು ಉರುಸಿನ ಮೇರವಣಿಗೆಯಲ್ಲಿ ಭಾಗಿಯಾಗಿದ್ದರು.

### ಚಿನ್ನದ ಕಂತಿ ಸಾಂಸ್ಕೃತಿಕ ಸಭಾಭವನದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಹಳ್ಳಿಗಳ ಅಭಿವೃದ್ಧಿಯೇ ದೇಶಕ್ಕೆ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಭಾರತ ದೇಶ ಹಳ್ಳಿಗಳ ದೇಶ. ಹಳ್ಳಿಗಳು ಹೆಚ್ಚು ಅಭಿವೃದ್ಧಿಯಾದರೆ ದೇಶಕ್ಕೆ ಬಹುದೊಡ್ಡ ಶಕ್ತಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ತಾಜ್ ಸುಲ್ತಾನಪುರದಲ್ಲಿ ಚಿನ್ನದ ಕಂತಿ ಸಾಂಸ್ಕೃತಿಕ ಸಭಾಭವನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸ್ವಾತಂತ್ರ್ಯ ಬಂದು 77 ವರ್ಷಗಳು ಗತಿಸಿದರೂ ಇನ್ನೂ ಹಲವಾರು ಹಳ್ಳಿಗಳಿಗೆ ಓಡಾಡುವ ಒಳ್ಳೆಯ ರಸ್ತೆ, ಶುದ್ಧವಾದ ಕುಡಿಯುವ ನೀರು, ಓದುವ ಮಕ್ಕಳಿಗೆ ಉತ್ತಮವಾದ ಶಾಲೆಗಳಿಲ್ಲ. ನಗರ ಪ್ರದೇಶಗಳು ಹೆಚ್ಚು ಬೆಳೆಯುತ್ತಾ



ಅತಿಯಾದ ಜನ ಸಂಖ್ಯೆಯಿಂದ ತುಂಬಿ ತುಳುಕುತ್ತಿವೆ. ಹಳ್ಳಿಯ ಜನ ನಗರಕ್ಕೆ ಸೇರುವುದರಿಂದ ಗ್ರಾಮೀಣ ಭಾಗದಲ್ಲಿ ದುಡಿಯುವ ಜನರು ಇಲ್ಲದಂತಾಗಿದೆ. ಇದರಿಂದಾಗಿ ಕೃಷಿ ಭೂಮಿಯಲ್ಲಿ ಕೆಲಸ ಮಾಡುವ ಜನರ ಕೊರತೆಯಾಗಿದೆ. ನಗರಗಳಂತೆ ಹಳ್ಳಿಗಳು ಅಭಿವೃದ್ಧಿಯಾದರೆ ಜನಸಂಖ್ಯೆಯನ್ನು ನಿಯಂತ್ರಿಸಬಹುದು. ಆದ್ದರಿಂದ ಪಕ್ಷಾತೀತವಾಗಿ ಜಾತ್ಯಾತೀತವಾಗಿ ನಮ್ಮೆಲ್ಲ ರಾಜಕೀಯ ಧುರೀಣರು ಗಮನಹರಿಸುವ ಅವಶ್ಯಕತೆ ಇದೆ ಎಂದರು.

ಕಲಬುರ್ಗಿ ಗ್ರಾಮೀಣ ಭಾಗದ ಶಾಸಕ ಬಸವರಾಜ್ ಮತ್ತಿಮಡು ಸಮಾರಂಭ ಉದ್ಘಾಟಿಸಿ ಶ್ರೀ ಮಠದ ಅಭಿವೃದ್ಧಿಗೆ ಹೆಚ್ಚಿನ ಸಹಕಾರ ಕೊಡುವುದಾಗಿ ಭರವಸೆ ನೀಡಿದರು. ಕಲಬುರ್ಗಿ ದಕ್ಷಿಣ ಭಾಗದ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, ಮುಂಬರುವ ದಿನಗಳಲ್ಲಿ ಸಭಾಂಗಣ ನಿರ್ಮಾಣಕ್ಕೆ ವಿಶೇಷ ಅನುದಾನವನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಮಾತು ಕೊಟ್ಟರು. ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ಮಾತನಾಡಿ, ಮಠ ಮಂದಿರಗಳು ಸಾರ್ವಜನಿಕವಾಗಿ ಜನರಿಗೆ ಅನುಕೂಲ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಾ ಬಂದಿವೆ. ನನ್ನ ಅಧಿಕಾರದ ಸಂದರ್ಭದಲ್ಲಿ ಬಹಳಷ್ಟು ಸಂಘ-ಸಂಸ್ಥೆಗಳಿಗೆ, ಮಂದಿರಗಳಿಗೆ ವಿಶೇಷ ಅನುದಾನ ಕೊಟ್ಟು ಅಭಿವೃದ್ಧಿಪಡಿಸಿದ ಸಂತೃಪ್ತಿ ನನಗಿದೆ ಎಂದರು.

ನೇತೃತ್ವ ವಹಿಸಿದ ಶ್ರೀನಿವಾಸ್ ಸರಡಗಿ ಡಾ. ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಈ ಗ್ರಾಮದ ಚಾರಿತ್ರಿಕ ಇತಿಹಾಸದಲ್ಲಿ ಅವಿಸ್ಮರಣೀಯ ದಿನ. ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನದಿಂದ ಶ್ರೀಮಠ ಮತ್ತು ಸುಲ್ತಾನ್‌ಪುರ ಗ್ರಾಮ ಮುಂದಿನ ದಿನಗಳಲ್ಲಿ ಹೆಚ್ಚು ಅಭಿವೃದ್ಧಿಯಾಗುವುದೆಂಬ ನಂಬಿಕೆ ನಮಗಿದೆ. ಕಲ್ಬುರ್ಗಿ ಜಿಲ್ಲಾ ಕೇಂದ್ರದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಭವ್ಯ ಸಮಾರಂಭ ಹಮ್ಮಿಕೊಳ್ಳುವ ಕಾರ್ಯಕ್ಕೆ ಎಲ್ಲ ರಾಜಕೀಯ ಧುರೀಣರ ಸಹಕಾರ ಅಗತ್ಯವೆಂದರು.

ಸಮಾರಂಭದಲ್ಲಿ ಸ್ಟೇಷನ್ ಬಬಲಾದ ಬೃಹನ್ ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು, ಚೌದಾಪುರಿ ಹಿರೇಮಠದ ಡಾ. ರಾಜಶೇಖರ ಶಿವಾಚಾರ್ಯ ಸ್ವಾಮಿಗಳು, ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ತೊನಸಿನಹಳ್ಳಿ ಚರಂತೇಶ್ವರ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡಿದ್ದರು. ಕಾಂಗ್ರೆಸ್ ಧುರೀಣ ನೀಲಕಂಠರಾವ್ ಮೂಲಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂಟು ದಿನಗಳಿಂದ ನಡೆದುಕೊಂಡು ಬಂದ ಶ್ರೀ ಜಗದ್ಗುರು ರೇವಣಸಿದ್ದೇಶ್ವರ ಪುರಾಣವನ್ನು ಸಿದ್ದೇಶ್ವರ ಶಾಸ್ತ್ರಿಗಳು ಮಂಗಲಗೊಳಿಸಿದರು.

ಸಮಾರಂಭಕ್ಕೂ ಮುನ್ನ ಭವ್ಯ ಮೆರವಣಿಗೆಯೊಂದಿಗೆ ಜಗದ್ಗುರುಗಳನ್ನು ಬರಮಾಡಿಕೊಳ್ಳಲಾಯಿತು.

## ಸಿವಿಲ್ ಇಂಜಿನಿಯರ್ಸ್‌ಗೆ ನೂತನ ಕಟ್ಟಡ

▶▶ಮೊದಲನೇ ಪುಟದಿಂದ

1994ರಲ್ಲಿ ಆರಂಭವಾದ ಸಂಘವು, ವೃತ್ತಿ ನಿರತ ಇಂಜಿನಿಯರ್‌ಗಳ ನಡುವೆ ಸ್ನೇಹ ಸೌಹಾರ್ದತೆ, ತಾಂತ್ರಿಕ ವಿಚಾರ ವಿನಿಮಿಯ, ಕಾರ್ಮಿಕರ ಹಾಗೂ ಕಟ್ಟಡ ಕಟ್ಟುವ ಮಾಲೀಕರೊಂದಿಗೆ ಉತ್ತಮ ಬಾಂಧವ್ಯ ಬೆಸೆಯುವ ಕೆಲಸ ಮಾಡುತ್ತಿದೆ. ಕಟ್ಟಡ ಕಾರ್ಮಿಕರು, ಮಾಲೀಕರು ಮತ್ತು ವೃತ್ತಿನಿರತ ಇಂಜಿನಿಯರ್‌ಗಳ ಉಪಯೋಗಕ್ಕಾಗಿ 2 ವರ್ಷಕ್ಕೊಮ್ಮೆ ಗೃಹಶೋಭಾ, ಕಟ್ಟಡ ಸಾಮಗ್ರಿಗಳ ಬೃಹತ್ ಪ್ರದರ್ಶನ ಬಿಲ್ಡ್‌ಮ್ಯಾಟ್, ತಾಂತ್ರಿಕ ಕೈಪಿಡಿ ಬಿಡುಗಡೆ ಸಹಿತ ಅನೇಕ ಉಪಯುಕ್ತ ಕಾರ್ಯಕ್ರಮಗಳನ್ನು ಮಾಡಿದ್ದು, ಸದ್ಯ ನೂತನ ಕಟ್ಟಡದ ಮೂಲಕ ತಾಂತ್ರಿಕ ಮಾಹಿತಿಯನ್ನು ನೀಡುವ ಕೆಲಸ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಎಸ್.ಎಂ. ಅಂಗಡಿ, ಬಸವರಾಜ ಮಳ್ಳಣ್ಣವರ, ಎಂ.ಪಿ. ಪಾಟೀಲ, ಎ.ಪಿ. ಕೋಟಿಗೌಡ, ಬಿ.ಆರ್. ಹೊಸಮನಿ, ವಿರೂಪಾಕ್ಷ ನೀಲಗುಂದ, ರಾಜು, ಶಂಕರ ಬಾಕಳೆ, ಎಂ.ಎಸ್. ಗೌಡಪ್ಪಗೌಡ, ರಾಘವೇಂದ್ರ ಭಾಂಡಗೆ ಉಪಸ್ಥಿತರಿದ್ದರು.

## ಪಾಕಿಸ್ತಾನ ಪರ ಬೇಹುಗಾರಿಕೆ ನಡೆಸಿದ ಸಹದೇವ್ ಸಿನ್ಹ ಬಂಧನ

■ವಿಜಯಸಾಕ್ಷಿ ಸುದ್ದಿ, ಗುಜರಾತ್

ಸೇನಾ ಕೇಂದ್ರಗಳ ಬಗ್ಗೆಗಿನ ಸೂಕ್ಷ್ಮ ಮಾಹಿತಿಯನ್ನು ಪಾಕಿಸ್ತಾನದ ಗೂಢಚಾರರಿಗೆ ನೀಡಿದ ಆರೋಪದ ಮೇಲೆ ಗುಜರಾತ್ ಭಯೋತ್ಪಾದನಾ ನಿಗ್ರಹ ದಳವು ಶನಿವಾರ ಕಚ್ ಜಿಲ್ಲೆಯ 28 ವರ್ಷದ ಗುತ್ತಿಗೆ ಆರೋಗ್ಯ ಕಾರ್ಯಕರ್ತನನ್ನು ಬಂಧಿಸಿದೆ ಎಂದು ಪಿಟಿಐ ವರದಿ ಮಾಡಿದೆ. ಕಳೆದ ಎಂಟು ತಿಂಗಳಲ್ಲಿ ರಾಜ್ಯದಲ್ಲಿ ಬೇಹುಗಾರಿಕೆ ಆರೋಪಕ್ಕೆ ಸಂಬಂಧಿಸಿದ ಮೂರನೇ ಬಂಧನ ಇದಾಗಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ಹೇಳಿದೆ. ಗುಜರಾತ್ । ಪಾಕಿಸ್ತಾನ ಪರ

ಆರೋಪಿಯನ್ನು ಕಚ್‌ನ ಮಾತಾ-ನಾ-ಮಧ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನೇಮಕಗೊಂಡಿರುವ ಗುತ್ತಿಗೆ ಬಹುಪಯೋಗಿ ಆರೋಗ್ಯ ಕಾರ್ಯಕರ್ತ ಸಹದೇವ್‌ಸಿನ್ಹ ದೀಪುಭಾ ಗೋಹಿಲ್ ಎಂದು ಗುರುತಿಸಲಾಗಿದೆ. ಗಡಿ ಭದ್ರತಾ ಪಡೆ ಮತ್ತು ಭಾರತೀಯ ನೌಕಾಪಡೆಯ ಕೇಂದ್ರಗಳ ಸೂಕ್ಷ್ಮ ಫೋಟೋಗಳು ಮತ್ತು ವೀಡಿಯೊಗಳನ್ನು ಗೂಢಚಾರರಿಗೆ ಹಂಚಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

2023 ರ ಮಧ್ಯದಲ್ಲಿ ಅದಿತಿ ಭಾರದ್ವಾಜ್ ಎಂದು ಗುರುತಿಸಿಕೊಂಡ ಪಾಕಿಸ್ತಾನಿ ಏಜೆಂಟ್‌ನೊಂದಿಗೆ ಗೋಹಿಲ್ ಸಂಪರ್ಕಕ್ಕೆ ಬಂದರು ಎಂದು ಪೊಲೀಸರು ತಿಳಿಸಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ.

### ದೇವಾಂಗ ಸಮಾಜದಿಂದ ಮಂತ್ರಾಲಯ ಶಾಖಾಮಠಕ್ಕೆ 'ದೊಡ್ಡ ಘಂಟೆ' ಸಮರ್ಪಣೆ

## ಮಂದಿರ ನಿರ್ಮಾಣದಲ್ಲಿ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಕಳಸಾಪೂರ ಗ್ರಾಮದಲ್ಲಿ ನಿರ್ಮಾಣವಾಗಿರುವ ಮಂತ್ರಾಲಯ ರಾಘವೇಂದ್ರ ಮಠದ ಶಾಖಾ ಮಠದ ಪ್ರಾಣ-ಪ್ರತಿಷ್ಠೆ ಮೇ 30, 31ರಂದು ನಡೆಯಲಿರುವ ಹಿನ್ನೆಲೆಯಲ್ಲಿ ದೇವಾಂಗ ಸಮಾಜದಿಂದ ಶ್ರೀ ಹಳೆ-ಬನಶಂಕರಿ ದೇವಸ್ಥಾನದಲ್ಲಿ 'ದೊಡ್ಡ ಘಂಟೆ'ಗೆ ಪೂಜೆ ಸಲ್ಲಿಸಿ, ಸಮರ್ಪಣೆ ಮಾಡಲಾಯಿತು.

ಶುಕ್ರವಾರ ಶ್ರೀ ಹಳೆ-ಬನಶಂಕರಿ ದೇವಸ್ಥಾನದಲ್ಲಿ ಪಾಲಕಿ ಮಹೋತ್ಸವದ ನಂತರ ನಡೆದ ಸಮರ್ಪಣಾ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ದೇವಾಂಗ ಸಮಾಜದ ಅಧ್ಯಕ್ಷರಾದ ದಶರಥರಾಜ ಕೊಳ್ಳಿಯವರು ಸರ್ವರನ್ನು ಸ್ವಾಗತಿಸಿದರು.

ಮಂತ್ರಾಲಯ ರಾಘವೇಂದ್ರ ಮಠದ ಸೇವೆಯಲ್ಲಿ ಸಂತೃಪ್ತರಾಗಿರುವ ಶ್ರೀಗಳ ಆದೇಶದಂತೆ ಅಪಮೃತ್ಯು ಪವಾಡ ಕ್ಷೇತ್ರದ ಕಿರಿಟಗೇರಿ



ದೇವಾಂಗ ಸಮಾಜದ ನೌಕರ ಸಂಘದ ಅಧ್ಯಕ್ಷ ರಾಘವೇಂದ್ರ ಕೊಪ್ಪಳ ಮಾತನಾಡಿ, ಧಾರ್ಮಿಕ, ಮಠ-ದೇವಸ್ಥಾನಗಳು ನಿರ್ಮಾಣವಾಗುವಾಗ ಎಲ್ಲರ ಸಹಕಾರ ಅಗತ್ಯವಾಗಿದೆ. ಇದರಿಂದ ಸನಾತನ ಹಿಂದೂ ಧರ್ಮ ಶಕ್ತಿಶಾಲಿಯಾಗುತ್ತದೆ. ಸಮಾಜದವರಾದ ಶ್ರೀನಿವಾಸ ಹುಬ್ಬಳ್ಳಿ ಅವರು ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಭಕ್ತರಾಗಿದ್ದು, ಶಾಖಾಮಠಕ್ಕೆ ದೊಡ್ಡ ಘಂಟೆಯನ್ನು ಎಲ್ಲರ ಸಹಕಾರದಿಂದ ಸಮರ್ಪಣೆ ಮಾಡಿದ್ದು ವಿಶೇಷವಾಗಿದೆ. ಘಂಟೆ ಸಮರ್ಪಣೆಯಿಂದ ಅವರ ಮುಂದಿನ ಪೀಳಿಗೆ ಮೂಕತನ ಹಾಗೂ ಕಿವುಡುತನದಿಂದ ಮುಕ್ತರಾಗುತ್ತಾರೆ. ಇದು ಜ್ಞಾನಿಗಳು ಹೇಳುವ ಮಾತು ಎಂದು ತಿಳಿಸಿದರು.

ಗ್ರಾಮಸ್ಥರ ಭೂ-ದಾನಿಗಳ ಸಹಕಾರದೊಂದಿಗೆ ಶ್ರೀಗಳ ಅಮೋಘ ಸಂಕಲ್ಪದಂತೆ ಮುಂದಿನ ದಿನದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳು ನಡೆದಾಡಿದ ಪುಣ್ಯಕ್ಷೇತ್ರ ಹಾಗೂ ಪವಾಡ ಮಾಡಿದ ಕ್ಷೇತ್ರ ಅಭಿವೃದ್ಧಿಯಾಗಲಿದೆ ಎಂದು ಮಂತ್ರಾಲಯದ ವಿಶೇಷ ಪ್ರತಿನಿಧಿ ಶ್ರೀನಿವಾಸ ಹುಬ್ಬಳ್ಳಿಯವರು ಸಂತಸ ವ್ಯಕ್ತಪಡಿಸಿದರು.

ಶ್ರೀರಾಘವೇಂದ್ರ ಪಾದಯಾತ್ರೆ ಕಮಿಟಿ ಅಧ್ಯಕ್ಷ ರಾಘವೇಂದ್ರ ಕಾಲವಾಡವರು ಶಾಖಾ ಮಠದ ಪರವಾಗಿ ದೊಡ್ಡ ಘಂಟೆಯನ್ನು ಸಾಂಕೇತಿಕವಾಗಿ ಸ್ವೀಕಾರ ಮಾಡಿದರು. ಈ ಸಂದರ್ಭದಲ್ಲಿ ದಂಪತಿಗಳಾದ ಶ್ರೀನಿವಾಸ ಹುಬ್ಬಳ್ಳಿ-ಲಕ್ಷ್ಮಿ ಹುಬ್ಬಳ್ಳಿ ಹಾಗೂ ಮಕ್ಕಳು, ರಾಮಚಂದ್ರ ಹುಬ್ಬಳ್ಳಿ, ಮೇಘಾ ಹುಬ್ಬಳ್ಳಿ ಹಾಗೂ ಅಪಮೃತ್ಯು ಪವಾಡ ಕ್ಷೇತ್ರ ಕಿರಟಗೇರಿ ಗ್ರಾಮದ ಪರವಾಗಿ ಕಲ್ಮೇಶ್ವರಯ್ಯ ಹಿರೇಮಠ, ಚನ್ನಯ್ಯ ಹಿರೇಮಠ, ನವೀನ ಮೇಡಿ, ರಾಜು ಕೋಚಿ, ಬಸವರಾಜ ಮುದಗಲ್, ಲಕ್ಷ್ಮಣ ನೀಲಗುಂದ, ಮೋಹನ ಶಾಗವಿ, ರಮೇಶ ಮೇಡಿ, ಚಿದಾನಂದ ಬಣ್ಣದಬಾವಿ, ಈರಣ್ಣ ಹುಳ್ಳಿ, ಹರ್ಷ ಮುಂತಾದವರು ಉಪಸ್ಥಿತರಿದ್ದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಹಾಯವಾಣಿ ಕೇಂದ್ರ ಆರಂಭ

## ತುರ್ತು ಸಂದರ್ಭಗಳಲ್ಲಿ ಇಲ್ಲಿಗೆ ಸಂಪರ್ಕಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಅತಿವೃಷ್ಟಿ ಹಾಗೂ ಪ್ರಕೃತಿ ವಿಕೋಪದ ತುರ್ತು ಸಂದರ್ಭಗಳಲ್ಲಿ ಜಿಲ್ಲೆಯ ನಾಗರಿಕರು ಹಾಗೂ ಮಹಾನಗರದ ಸಾರ್ವಜನಿಕರು ಸಂಪರ್ಕಿಸಲು ಅನುಕೂಲವಾಗುವಂತೆ ಡಿಸಿ ಕಚೇರಿ, ಎಲ್ಲ ತಾಲೂಕುಗಳ ತಹಸೀಲ್ದಾರ ಕಚೇರಿಗಳಲ್ಲಿ ಹಾಗೂ ಮಹಾನಗರ ಪಾಲಿಕೆಯಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಲಾಗಿದ್ದು, ತುರ್ತು ಅಗತ್ಯತೆಗಳಲ್ಲಿ ಸಾರ್ವಜನಿಕರು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.



ಶ್ರೀಮತಿ ದಿವ್ಯ ಪ್ರಭು ಜಿ.ಆರ್.ಜೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯ ಹವಾಮಾನ ಇಲಾಖೆಯ ವರದಿಯಂತೆ, ಧಾರವಾಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುವ ಸಂಭವವಿದ್ದು, ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ಮಳೆ ಹೆಚ್ಚಾದಾಗ ನೆರೆ ಹಾವಳಿ ಮತ್ತು ಬೆಣ್ಣಹಳ್ಳ, ತುಪ್ಪರಿ ಹಳ್ಳದ ಅಚ್ಚುಕಟ್ಟು ಪ್ರದೇಶಗಳಲ್ಲಿ ಪ್ರವಾಹ ಭೀತಿಯುಂಟಾಗುವ ಸಂಭವವಿದೆ ಎಂದು ಅವರು ತಿಳಿಸಿದ್ದಾರೆ.

ಕಾರಣ, ಜಿಲ್ಲೆಯಲ್ಲಿ ನೆರೆ ಹಾವಳಿ, ಪ್ರವಾಹ ಅಥವಾ ಇನ್ನಿತರೆ ಅವಘಡಗಳಿಗೆ ಸಂಬಂಧಿಸಿದಂತೆ ತುರ್ತು ಸಹಾಯಕ್ಕಾಗಿ, ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ, ಉಪವಿಭಾಗಾಧಿಕಾರಿಗಳ ಕಛೇರಿ ಮತ್ತು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ದಿನ 24 ಗಂಟೆ ಕಾರ್ಯನಿರ್ವಹಿಸಲು ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಸಹಾಯವಾಣಿ ಕೇಂದ್ರಗಳು ನಿರಂತರವಾಗಿ ದಿನದ 24 ಗಂಟೆ ಕಾರ್ಯ ನಿರ್ವಹಿಸುತ್ತವೆ. ರಾತ್ರಿ-ಹಗಲು ಕರ್ತವ್ಯ ನಿರ್ವಹಿಸಲು ಅಗತ್ಯ ಸಿಬ್ಬಂದಿಗಳನ್ನು ಈಗಾಗಲೇ ನೇಮಿಸಲಾಗಿದೆ. ದೂರು ಬಂದ ತಕ್ಷಣ ಕರ್ತವ್ಯದಲ್ಲಿರುವ ಸಿಬ್ಬಂದಿಗಳು ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ತಿಳಿಸಿ, ಸಮಸ್ಯೆ ಪರಿಹರಿಸಲು ಕ್ರಮವಹಿಸುತ್ತಾರೆ. ಇದಕ್ಕೆ ಸಂಭಂದಿಸಿದ ವಿವರಗಳನ್ನು ದಾಖಲಿಸಿ, ಮೇಲಾಧಿಕಾರಿಗಳ ಗಮನಕ್ಕೆ ತರುತ್ತಾರೆ ಎಂದು ಅವರು ತಿಳಿಸಿದ್ದಾರೆ.

**ಸಹಾಯವಾಣಿ ಕೇಂದ್ರಗಳ ವಿವರ**

ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ-0836 2445508ಗೆ ಅಥವಾ ಟೋಲ್ ಫ್ರೀ ಸಂಖ್ಯೆ: 1077ಗೆ ಹಾಗೂ ಮಹಾನಗರಪಾಲಿಕೆಯ ಸಹಾಯವಾಣಿ ಸಂಖ್ಯೆ: 0836 2213888, 0836 2213889 ಮತ್ತು 0836 2213869ಗೆ ಕರೆ ಮಾಡಿ, ತಿಳಿಸಬಹುದು.

ಉಪವಿಭಾಗಾಧಿಕಾರಿಗಳು ಕಚೇರಿ- 0836-2233860, ತಹಸೀಲ್ದಾರರ ಕಾರ್ಯಾಲಯ ಧಾರವಾಡ- 0836-2233822, ಅಳ್ನಾವರ-0836-2385544, ಹುಬ್ಬಳ್ಳಿ ನಗರ-0836-2358035, ಹುಬ್ಬಳ್ಳಿ-0836-2233844, ಕಲಘಟಗಿ-08370-284535, ಕುಂದಗೋಳ-08304-290239, ನವಲಗುಂದ 08380-229240 ಮತ್ತು ಅಣ್ಣಿಗೇರಿ- 8618442759 ಈ ಸಹಾಯವಾಣಿಗಳಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

## ಕರ್ನಲ್ ಸೋಫಿಯಾ ವಿರುದ್ಧ ಹೇಳಿಕೆ ನೀಡಿದ್ದ ಸಚಿವ ನಾಪತ್ತೆ..!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪರೇಷನ್ ಸಿಂಧೂರದ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ್ದ ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದ ಮಧ್ಯಪ್ರದೇಶದ ಸಚಿವ "ಕಾಣೆಯಾಗಿದ್ದಾರೆ" ಎಂದು ರಾಜ್ಯದ ಇಂದೋರ್ ಜಿಲ್ಲೆಯ ಕಾಂಗ್ರೆಸ್ ನಾಯಕರೊಬ್ಬರು ಪೋಸ್ಟರ್‌ಗಳನ್ನು ಹಂಚಿಕೊಂಡಿದ್ದಾರೆ. ಅವರ ಬಗ್ಗೆ ಮಾಹಿತಿ ನೀಡುವವರಿಗೆ ಬಹುಮಾನ ನೀಡುವುದಾಗಿ ಕೂಡಾ ಅವರು ಹೇಳಿದ್ದಾರೆ.

'ಗುಮ್ಶುದಾ ಕಿ ತಲಾಶ್' (ಕಾಣೆಯಾದ ವ್ಯಕ್ತಿಗಾಗಿ ಹುಡುಕಾಟ) ಎಂಬ ಶೀರ್ಷಿಕೆಯೊಂದಿಗೆ ಪೋಸ್ಟರ್‌ಗಳ ಮೂಲಕ, ಬುಡಕಟ್ಟು ವ್ಯವಹಾರಗಳ ಸಚಿವರ ಬಗ್ಗೆ "ಮಾಹಿತಿ" ನೀಡಿದವರಿಗೆ 11,000 ರೂ.ಗಳನ್ನು ನೀಡುವುದಾಗಿ ಕಾಂಗ್ರೆಸ್ ನಾಯಕ ಹೇಳಿದ್ದಾರೆ.

"ಸಚಿವ ಶಾ ಎಲ್ಲಿಯೂ ಕಾಣುತ್ತಿಲ್ಲ, ಸಂಪುಟ ಸಭೆಗಳಲ್ಲಿಯೂ ಕಾಣಿಸದ ಕಾರಣ ನಾವು ಈ



ಪೋಸ್ಟರ್‌ಗಳನ್ನು ಹಾಕಿದ್ದೇವೆ" ಎಂದು ಅವರು ಶನಿವಾರ ಹೇಳಿದ್ದಾರೆ.

ಅವರು ರಾಜೀನಾಮೆ ನೀಡುವವರೆಗೂ ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ ಎಂದು ಜಿಲ್ಲೆಯಲ್ಲಿ ಪೋಸ್ಟರ್‌ಗಳನ್ನು ಹಾಕಿರುವ ಇಂದೋರ್ ಜಿಲ್ಲಾ ಕಾಂಗ್ರೆಸ್ ಸೇವಾ ದಳದ ಅಧ್ಯಕ್ಷ ವಿವೇಕ್ ಖಂಡೇಲ್ವಾಲ್ ಹೇಳಿದ್ದಾರೆ.

ಮೇ 12 ರಂದು ಜಿಲ್ಲೆಯ ಮೋಹ್ ಬಳಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ್ದ ಸಚಿವ ಶಾ ಅವರು, ಕರ್ನಲ್ ಸೋಫಿಯಾ ಖುರೇಷಿ ಅವರನ್ನು "ಭಯೋತ್ಪಾದಕ ಸಹೋದರಿ" ಎಂದು ಉಲ್ಲೇಖಿಸಿದ್ದರು.ಇದರ ನಂತರ ಅವರ ವಿರುದ್ಧ ದೇಶದಾದ್ಯಂತ ಆಕ್ರೋಶ ವ್ಯಕ್ತವಾಗಿತ್ತು.

ಈ ನಡುವೆ, ಮಧ್ಯಪ್ರದೇಶ ಹೈಕೋರ್ಟ್ ಸ್ವಯಂಪ್ರೇರಿತವಾಗಿ ಅವರ ಹೇಳಿಕೆಯನ್ನು ಪರಿಗಣಿಸಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲು ಆದೇಶಿಸಿತು. ತರುವಾಯ, ಸುಪ್ರೀಂಕೋರ್ಟ್ ಅವರನ್ನು ಖಂಡಿಸಿ, ಈ ವಿಷಯದ ಬಗ್ಗೆ ಎಸ್‌ಐಟಿ ತನಿಖೆಗೆ ಆದೇಶಿಸಿದೆ.

## ಮಕ್ಕಳ ಕನಸುಗಳಿಗೆ ಬಣ್ಣ ತುಂಬುತ್ತಿರುವ ಪ್ರೌಢಶಾಲೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯ ಸಮಗ್ರ ಮಾಹಿತಿಯುಳ್ಳ ಕಿರು ಕರಪತ್ರಿಕೆಯನ್ನು ದತ್ತು ಉಸ್ತುವಾರಿ ಡಾ. ಬಸವರಾಜ್ ಧಾರವಾಡ ಅವರಿಂದ ಧಾರವಾಡದ ಅಪರ ಆಯುಕ್ತರ ಕಚೇರಿಯ ಆಯುಕ್ತರಾದ ಜಯಶ್ರೀ ಶಿಂತ್ರಿ, ನಿರ್ದೇಶಕರಾದ ಈಶ್ವರ ನಾಯಕ, ಸಹಾಯಕ ನಿರ್ದೇಶಕರಾದ ಶ್ಯಾಮಲಾ ಎಸ್.ಹೆಚ್. ಸ್ವೀಕರಿಸಿ ಶಾಲೆ



ಅಭಿವೃದ್ಧಿಗೊಂಡ ಕುರಿತು ಸಂತಸ ಹಂಚಿಕೊಂಡರು.

ಗದುಗಿನ ಸಿದ್ದಲಿಂಗ ನಗರದ ಸರಕಾರಿ ಪ್ರೌಢಶಾಲೆ ಬಸವರಾಜ ಹೊರಟ್ಟಿ ಅವರ ಸಹಕಾರದಿಂದ ಕೇವಲ ಎರಡು ವರ್ಷಗಳಲ್ಲಿ ಅಮೂಲಾಗ್ರಹ ಬದಲಾವಣೆಯಾಗುವ ಮೂಲಕ ಎಲ್ಲ ಮೂಲಭೂತ ಸೌಕರ್ಯಗಳನ್ನು ಹೊಂದಿ ತನ್ನ ಕಳೆಯನ್ನ ಹೆಚ್ಚಿಸಿಕೊಂಡು ನೂರಾರು ಬಡ, ಮಧ್ಯಮ, ಗ್ರಾಮೀಣ ವಿದ್ಯಾರ್ಥಿಗಳಿಗೆ ಅಕ್ಷರ ಕಲಿಕೆಗೆ ಅವಕಾಶ ಕಲ್ಪಿಸಿ, ಅವರ ಕನಸುಗಳಿಗೆ ಬಣ್ಣ ತುಂಬುತ್ತಿರುವುದು ಹೆಮ್ಮೆಯ ಸಂಗತಿ. ಯಾವ ಖಾಸಗಿ ಶಾಲೆಗಳಿಗಿಂತಲೂ ಈ ಸರ್ಕಾರಿ ಪ್ರೌಢಶಾಲೆ ಕಡಿಮೆ ಇಲ್ಲ ಎನ್ನುವಂತೆ ಎಲ್ಲ ಶಾಲೆಗಳಿಗೂ ಮಾದರಿಯಾಗಿದೆ. ಇದಕ್ಕೆ ಕಾರಣೀಕರ್ತರಾದ ಬಸವರಾಜ್ ಹೊರಟ್ಟಿ ದಂಪತಿಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಪರವಾಗಿ ಅಭಿನಂದಿಸುವುದಾಗಿ ಹೇಳಿದರು.

## ದಿಲೀಪ್ ಕುಮಾರ್ ಧೋಕಾರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಬ್ಬಿಗೇರಿ ಕಂಪೌಂಡ್‌ನಲ್ಲಿರುವ ಸ್ಥಾನಕವಾಸಿ ಜೈನ್ ಭವನದಲ್ಲಿ ರಾಯಚೂರ ನಿವಾಸಿಗಳಾದ ದಿಲೀಪ್ ಕುಮಾರ್ ಜಿ ಧೋಕಾ ಅವರು ತಮ್ಮ 58ನೇ ವಯಸ್ಸಿನಲ್ಲಿ ಸಂಸಾರದ ಸಂಪತ್ತು, ಸುಖಗಳನ್ನು ತ್ಯಜಿಸಿ ಜೂನ್ 11ರಂದು ಜೈನ ಮುನಿ ದೀಕ್ಷೆಯನ್ನು ಸ್ವೀಕರಿಸಲಿರುವ ಹಿನ್ನೆಲೆಯಲ್ಲಿ ಗದಗ ಜೈನ ಸಮಾಜದ ವತಿಯಿಂದ ಹಾಗೂ ಬಾಗಮಾರ ಪರಿವಾರದ ವತಿಯಿಂದ ಅವರ ಅಭಿನಂದನಾ ಸಮಾರಂಭವನ್ನು ಏರ್ಪಡಿಸಲಾಗಿತ್ತು. ಗದಗ ಜೈನ ಸಮಾಜದ ಅಧ್ಯಕ್ಷ ರೂಪಚಂದ ಪಾಲರೇಚಾ, ಉಪಾಧ್ಯಕ್ಷ ದಿನೇಶ ಜೈನ, ಕಿಶನ್‌ಲಾಲ ಬಾಗಮಾರ



ಹಾಗೂ ಸಮಾಜದ ಸದಸ್ಯರ ಸಮ್ಮುಖದಲ್ಲಿ ಅಭಿನಂದನಾ ಕಾರ್ಯಕ್ರಮ ನೆರವೇರಿತು. ಈ ಸಂದರ್ಭದಲ್ಲಿ ದಿಲೀಪ್ ಕುಮಾರ ಧೋಕಾ ಮಾತನಾಡಿ, ಸಂಸಾರ ಅಸಾರವಾಗಿದೆ. ಮಾನವ ಜನ್ಮ ಸಿಕ್ಕಿರುವುದು ಆತ್ಮ ಸಾಧನೆಗೆ ಹಾಗೂ ಮೋಕ್ಷವನ್ನು ಪಡೆಯಲು ಎಂದರು.

ಮಹಿಳಾ ಸಂಘದ ವತಿಯಿಂದ ಇಂದಿರಾಜಿ ಬಾಗಮಾರ ಹಾಗೂ ಮಮತಾ ಲುಂಕಡ್ ಮುಂತಾದ ಮಹಿಳಾ ಸದಸ್ಯರು ಅಭಿನಂದಿಸಿದರು. ಇಂದಿರಾಜಿ ಬಾಗಮಾರ ಮಾತನಾಡಿ, ಸಂಸಾರದ ಎಲ್ಲ ಸುಖಗಳನ್ನು ತ್ಯಜಿಸಿ ಅತೀ ಕಠಿಣವಾದ ಜೈನ ಸನ್ಯಾಸ ದೀಕ್ಷೆ ಪಡೆಯುವುದು ಸುಲಭದ ಮಾತಲ್ಲ. ಪರಿವಾರದ ಎಲ್ಲ ಸಂಬಂಧಗಳನ್ನು ತೊರೆದು ತಮ್ಮ ಆತ್ಮೋದ್ಧಾರಕ್ಕಾಗಿ ಹೋರಟಿರುವ ದಿಲೀಪಜಿಯವರಿಗೆ ಶುಭ ಕೋರಿದರು. ಈ ಸಂದರ್ಭದಲ್ಲಿ ಅಶೋಕ ಬಾಗಮಾರ, ಸಂಜಯ ಬಾಗಮಾರ, ದೀಪಚಂದ್, ವಿಜಯ್ ಕುಮಾರ್, ಕಿಶೋರ್, ಸಂಜಯ್, ಶ್ರವಣ್, ನಲಿನ್, ಶೈಲೇಶ್, ಸಂಕಿತ್, ಡಾ. ಆರ್.ಎನ್. ಗೋಡಬೋಲೆ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಜೈನ ಸಮಾಜದ ಉಪಾಧ್ಯಕ್ಷ ಕಿಶನ್‌ಲಾಲ ಬಾಗಮಾರ ನಿರೂಪಿಸಿದರು.

# ನಾಳೆ ಗ್ರಂಥಾಲಯ ಮೇಲ್ವಿಚಾರಕರಿಂದ ಧರಣಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಂಥಾಲಯ ಮೇಲ್ವಿಚಾರಕರು ಯಾವ ಇಲಾಖೆ ನೌಕರರು ಎಂದು ಪ್ರಶ್ನಿಸಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮೇ. 26ರಂದು ರಾಜ್ಯದ ಎಲ್ಲ ಗ್ರಂಥಾಲಯ ಮೇಲ್ವಿಚಾರಕರಿಂದ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದು ಎಂದು ಗ್ರಂಥಾಲಯ ಮೇಲ್ವಿಚಾರಕ ಸಂಘದ ಗದಗ ಜಿಲ್ಲಾಧ್ಯಕ್ಷ ಗವಿಸಿದ್ದಪ್ಪ ಹಳ್ಳಾಕರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಗದಗ ಜಿಲ್ಲೆಯ ಎಲ್ಲಾ ಗ್ರಂಥಾಲಯ ಮೇಲ್ವಿಚಾರಕರು ಧರಣಿಯಲ್ಲಿ ಭಾಗಿಯಾಗಬೇಕು. ಗ್ರಂಥಾಲಯ ಮೇಲ್ವಿಚಾರಕರು ಕಳೆದ 25–30 ವರ್ಷಗಳಿಂದ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಕೆಲಸ ಮಾಡಿದ್ದಾರೆ. ನಮ್ಮನ್ನೂ ಆರ್‌ಡಿಪಿಆರ್‌ಇಲಾಖೆಗೆ ಸೇರಿಸಿದರು. ಅದನ್ನು ಪ್ರಶ್ನಿಸಿ ಗ್ರಾಮ ಪಂಚಾಯಿತಿಯವರು ಹೋರಾಟ ಮಾಡಿದರು. ಹಾಗಾದರೆ ನಾವು ಯಾವ ಇಲಾಖೆ ನೌಕರರು ಎಂದು ಸರ್ಕಾರ ಸ್ಪಷ್ಟಪಡಿಸಬೇಕು ಎಂದಿದ್ದಾರೆ.

ಸೇವಾ ನಿಯಮಾವಳಿ ತರುವುದರ ಮೂಲಕ ನಮಗೆ ಮುಂಬಡ್ತಿ ನೀಡಬೇಕು. ಇಲ್ಲವಾದರೆ ಮಾತೃ ಇಲಾಖೆಗೆ ಕಳಿಸಬೇಕು. ಸಂಘದ ರಾಜ್ಯಾಧ್ಯಕ್ಷ ಸತ್ಯನಾರಾಯಣ ನೇತೃತ್ವದಲ್ಲಿ ಹೋರಾಟ ಜರುಗಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಸರ್ಕಾರದ ಗಮನ ಸೆಳೆಯಬೇಕೆಂದು ಹೇಳಿದ್ದು, ಈ ಹೇಳಿಕೆಗೆ ಜಿಲ್ಲಾ ಉಪಾಧ್ಯಕ್ಷ ವಿರೇಶ ತಮ್ಮನಗೌಡರ, ಖಜಾಂಚಿ ಭಗವಂತ ತಾರಿಕೊಪ್ಪ, ಜಿಲ್ಲಾ ಸಂಚಾಲಕ ಹಾಲಪ್ಪ ಕೋರ್ಲಹಳ್ಳಿ, ಮುಂಡರಗಿ ತಾಲೂಕಾಧ್ಯಕ್ಷ ಪ್ರೇಮಜಿ ಪವಾರ, ಕಾರ್ಯದರ್ಶಿ ಅಂದಪ್ಪ ತುರ್ಕಾನಿ ಸಮ್ಮತಿಸಿದ್ದಾರೆ.

### ಕಪ್ಪತಗುಡ್ಡದಲ್ಲಿ ಪತ್ತೆಯಾದ ವಿಶಿಷ್ಟ 'ಕಾಮನ ಬಿಲ್ಲು' ಜೇಡ

# ಜೀವವೈವಿಧ್ಯತೆಯ ಕನ್ನಡಿ ಕಪ್ಪತಗುಡ್ಡ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಲ್ಟಿಸಿಡೇ ಕುಟುಂಬಕ್ಕೆ ಸೇರಿದ ಸ್ಟೆನಾಲೂರಿಲಸ್ ಲೆಸರ್ಟಿ ಎಂಬ ವೈಜ್ಞಾನಿಕ ಹೆಸರಿನಿಂದ ಕರೆಯಲ್ಪಡುವ ವಿಶೇಷ ಜೇಡಗಳ ಪ್ರಭೇದ ಸಮೀಪದ ಕಪ್ಪತಗುಡ್ಡದ ಬೆಟ್ಟಗಳ ಶ್ರೇಣಿಗೆ ಹೊಂದಿಕೊಂಡಿರುವ ಮಾಗಡಿ/ಶೆಟ್ಟಿಕೆರೆ ಅರಣ್ಯ ವ್ಯಾಪ್ತಿಯಲ್ಲಿ ಪತ್ತೆಯಾಗಿದೆ. ಇದು ಕಪ್ಪತಗುಡ್ಡದ ಶ್ರೀಮಂತ/ವೈಶಿಷ್ಟ್ಯಪೂರ್ಣವಾದ ಜೀವ ವೈವಿಧ್ಯತೆಯನ್ನು ಸಾಕ್ಷೀಕರಿಸುತ್ತದೆ.

ಈ ಜೇಡವು ದಕ್ಷಿಣ ಭಾರತ ಮತ್ತು ಶ್ರೀಲಂಕಾ ದೇಶದಲ್ಲಿ ಸಾಮಾನ್ಯವಾಗಿ ಕಂಡುಬರುತ್ತವೆ. ಜೀವವೈವಿಧ್ಯ ಸಂಶೋಧಕ ಮಂಜುನಾಥ ನಾಯಕ, ಸಂಗಮೇಶ ಕಡಗದ, ಶರಣು ಗೌಡರ, ಬೆಂಗಳೂರಿನ ಎಸ್.ಸುನಿಲ್ ಕುಮಾರ್ ಈ ಜೇಡದ ಇರುವಿಕೆಯನ್ನು ಮಾಗಡಿ



ವ್ಯಾಪ್ತಿಯಲ್ಲಿ ಗುರುತಿಸಿದ್ದಾರೆ. ಇದರ ಮೈ ಬಣ್ಣವು ಆಕರ್ಷಕವಾಗಿದ್ದು, ಗಂಡು ಜೇಡಗಳ ಮುಖದ ಮುಂಭಾಗದಲ್ಲಿ ಕೆಂಪು ಮತ್ತು ನೀಲಿ ಸಮತಲ ಪಟ್ಟಿಗಳು ಮತ್ತು ಕಾಮನಬಿಲ್ಲಿನ ವರ್ಣ ಸಂಯೋಜನೆ ಯಂತಿರುವುದರಿಂದ ಕಾಮನಬಿಲ್ಲಿನ ಜೇಡ (ರೇನ್‌ಬೋ ಸ್ಪೈಡರ್) ಎನ್ನುತ್ತಾರೆ. ಈ ಜೇಡಗಳು ಬಲೆ ಹೆಣೆಯುವದಿಲ್ಲ ಮತ್ತು ಸ್ಥಳದಿಂದ ಸ್ಥಳಕ್ಕೆ ನೆಗೆಯುತ್ತವೆ. ಆದ್ದರಿಂದ ನೆಗೆ ಜೇಡ ಎಂಬ ಹೆಸರೂ ಇದಕ್ಕಿದೆ. ಇವು ಕೇವಲ 5ರಿಂದ 6 ಮಿ.ಮೀ ಗಾತ್ರ ಹೊಂದಿರುತ್ತವೆ. ಹೆಣ್ಣು ಜೇಡ ಗಂಡು ಜೇಡಕ್ಕಿಂತ ಸ್ವಲ್ಪ ದೊಡ್ಡದಿರುತ್ತದೆ.

ರೈತರಿಗೆ ಪಿಡಕವಾದ ಕೀಟಗಳನ್ನು ಭಕ್ಷಿಸುವುದರ ಮೂಲಕ ಜೇಡಗಳು ಜೈವಿಕ ಕೀಟ ನಿಯಂತ್ರಕಗಳಾಗಿವೆ. ಇವು ತಮ್ಮ ಗಾತ್ರಕ್ಕನುಗುಳವಾಗಿ ಪ್ರತಿನಿತ್ಯ 4–5 ಕೀಟಗಳನ್ನು ತಿನ್ನುತ್ತವೆ. ಹೀಗೆ ವಾರ್ಷಿಕವಾಗಿ ಸರಾಸರಿ 800 ಮಿಲಿಯನ್ ಕೀಟಗಳನ್ನು ಭಕ್ಷಿಸುವುದರ ಮೂಲಕ ರೈತನ ಮಿತ್ರನಾಗಿ ಬೇಟೆ ಮತ್ತು ಭಕ್ಷಕದ ಆಹಾರ ಸರಪಳಿಯಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಕೆಲವು ಪ್ರಭೇದದ ಜೇಡಗಳಲ್ಲಿರುವ ವಿಷವನ್ನು ವೈದ್ಯಕೀಯ ಕ್ಷೇತ್ರಗಳಲ್ಲಿ ಔಷಧಿ ತಯಾರಿಕೆಯಲ್ಲಿ ಬಳಸಲಾಗುತ್ತದೆ.

> ಸೂಜಿಮೊನೆಯಷ್ಟು ಚಿಕ್ಕ ಗಾತ್ರದಿಂದ ಹಿಡಿದು ಅಂಗೈ ಆಗಲ ಗಾತ್ರ ಜೇಡಗಳು ಪ್ರಪಂಚದ ಬೇರೆ ಬೇರೆ ಕಡೆ ಸಿಗುತ್ತವೆ. ಎಲ್ಲ ಜೇಡ ಪ್ರಭೇದಗಳು ರೇಷ್ಮೆಯನ್ನು ತಯಾರಿಸಿ ದಾರ ನೂಲುತ್ತವೆ. ಅದಕ್ಕೆಂದೇ ಅವುಗಳ ಶರೀರದ ಹಿಂಬದಿಯಲ್ಲಿ ರೇಷ್ಮೆ ಉತ್ಪಾದಿಸುವ ಅಂಗವಿರುತ್ತದೆ. ಕೃಷಿ ಪೀಡಕ ಕೀಟಗಳು, ವಿರಳವಾಗಿ ಕಪ್ಪೆ, ಹಲ್ಲಿ, ಚಿಕ್ಕ ಹಕ್ಕಿಗಳನ್ನು ಸೆರೆ ಹಿಡಿಯಲು ಮೃತ್ಯು ಪಾಶಗಳನ್ನು ನೇಯುತ್ತವೆ. ಬಲೆಯನ್ನು ನಿರ್ಮಿಸದೇ ಕೀಟಗಳನ್ನು ಬೇಟೆಯಾಡುವ ಜೇಡಗಳು ಕೀಟಗಳ ಮೇಲೇ ಅಂಟನ್ನು ಉಗುಳಿ ಬಂಧಿಸುತ್ತವೆ. ಜೇಡಗಳು ಇಲ್ಲವಾದಲ್ಲಿ ಅಡವಿ, ಹುಲ್ಲುಗಾವಲು, ವಿವಿಧ ಸಸ್ಯ ಪ್ರಧಾನ ಸ್ಥಳಗಳಲ್ಲಿ ತೊಂದರೆ ನೀಡುವ ಕೀಟಗಳ ಅನಿಯಂತ್ರಿತ ಹಾವಳಿಯಿಂದ ರೋಗಗ್ರಾಸ್ತವಾಗಿ ವಿನಾಶದ ಹಾದಿ ಹಿಡಿಯುತ್ತವೆ.
>
> **– ಮಂಜುನಾಥ ನಾಯಕ.**
> ಜೀವವೈವಿಧ್ಯ ಸಂಶೋಧಕರು.

ಗದಗ ಜಿಲ್ಲೆಯ ಕಪ್ಪತಗುಡ್ಡ ಜೀವವೈವಿಧ್ಯ ತಾಣವಾಗಿದ್ದು, ಇಲ್ಲಿ ಅಪರೂಪದ ಅಳಿವಿನಂಚಿನಲ್ಲಿರುವ ಕೀಟಗಳು ಮತ್ತು ಹೊಸಜಾತಿಯ ಕೀಟಗಳು ಇವೆ.

ನಿರಂತರ ಸಂಶೋಧನೆಯ ಮೂಲಕ ಅವುಗಳನ್ನು ಪ್ರಪಂಚಕ್ಕೆ ಪರಿಚಯಿಸಲಾಗುವುದು. ಪ್ರತಿ ಜೀವಿಯು ಆಹಾರ ಸರಪಳಿಯಲ್ಲಿ ಮಹತ್ವದ ಪಾತ್ರ ವಹಿಸಿ ಪರಿಸರ ಸಮತೋಲವನ್ನು ಕಾಪಾಡುತ್ತವೆ. ಸಾರ್ವಜನಿಕರಲ್ಲಿ ಈ ಕುರಿತು ಅರಿವು ಮೂಡಿಸಲಾಗುತ್ತಿದೆ. ಮನುಷ್ಯ ಸೇರಿ ಪ್ರತಿ ಜೀವಿಯೂ ಪ್ರಕೃತಿಯ ಭಾಗವಾಗಿದ್ದು, ಪರಿಸರದ ಪ್ರತಿ ಜೀವಿಗಳ ಸಂಖ್ಯೆ ನಿರ್ದಿಷ್ಟ ಅನುಪಾತದಲ್ಲಿದ್ದಾಗ ಮಾತ್ರ ಆರೋಗ್ಯಕರ ಪರಿಸರ ಉಳಿಯುತ್ತದೆ ಎನ್ನುತ್ತಾರೆ ಜೀವ ಶಾಸ್ತ್ರಜ್ಞರು.

### ಅಗಡಿ ಇಂಜನಿಯರಿಂಗ್ ಕಾಲೇಜಿನಲ್ಲಿ ಪದವಿ ಪ್ರದಾನ ಸಮಾರಂಭ

# ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಲವು ವರ್ಷಗಳ ಸತತಾಭ್ಯಾಸ, ಪ್ರಾಮಾಣಿಕ ಪ್ರಯತ್ನ, ಕಠಿಣ ಪರಿಶ್ರಮ, ಶೃದ್ಧೆಯ ಫಲವಾಗಿ ಪಡೆದ ಇಂಜಿನಿಯರಿಂಗ್ ಪದವಿ ಉಜ್ವಲ ಭವಿಷ್ಯದ ಮೈಲಿಗಲ್ಲಾಗಿದೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ನೀವು ಕೈಗೊಳ್ಳುವ ಅಚಲ ನಿರ್ಧಾರ ಮುಖ್ಯವಾಗುತ್ತದೆ ಎಂದು ಗದಗ ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಸುರೇಶ ನಾಡಗೌಡರ ಹೇಳಿದರು.

ಅವರು ಶನಿವಾರ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಸಕ್ತ ಸಾಲಿನಲ್ಲಿ ತಾಂತ್ರಿಕ ಶಿಕ್ಷಣದ ವಿವಿಧ ವಿಭಾಗಗಳಲ್ಲಿ ಪದವಿ ಪೂರೈಸಿದ 340 ವಿದ್ಯಾರ್ಥಿಗಳ ಪದವಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಇಂದಿನ ತಾಂತ್ರಿಕ ಮತ್ತು ಔದ್ಯೋಗಿಕ ಯುಗದಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವಿಫುಲ ಅವಕಾಶಗಳಿದ್ದರೂ ಸ್ಪರ್ಧಾತ್ಮಕ ಮನೋಭಾವ ಅಗತ್ಯವಾಗಿದೆ. ವಿದ್ಯಾರ್ಥಿ ಜೀವನದ ನಂತರ ನಿಮ್ಮ ಜವಾಬ್ದಾರಿ ಹೆಚ್ಚಾಗುತ್ತದೆ. ನಿಮ್ಮ ಸುಂದರ ಭವಿಷ್ಯಕ್ಕಾಗಿ ಪಾಲಕರು ಹತ್ತಾರು ಆಸೆ–ಕನಸು ಹೊತ್ತು ತಮ್ಮನ್ನೇ ಸಮರ್ಪಿಸಿಕೊಂಡಿರುತ್ತಾರೆ. ಜೀವನದಲ್ಲಿ ಕೀಳರಿಮೆ ಬಿಟ್ಟು ದೃಡ ನಿರ್ಧಾರ, ಪ್ರಯತ್ನ, ಶಿಸ್ತು ರೂಢಿಸಿಕೊಳ್ಳಿ. ಕಲಿತ ಶಾಲೆ–ಕಾಲೇಜು, ಶಿಕ್ಷಕರು, ಪಾಲಕರ ಬಗ್ಗೆ ಸದಾ ಪ್ರೀತಿ, ಗೌರವವಿರಲಿ. ವಿದೇಶಕ್ಕೆ ಹೋದವರು ತಂದೆ–ತಾಯಿಗಳನ್ನು ವೃದ್ಧಾಶ್ರಮಕ್ಕೆ ತಳ್ಳದಿರಿ. ಪಾಲಕರ ನಿರ್ಲಕ್ಷ್ಯ ಈಗ ಕಾನೂನು ಚೌಕಟ್ಟಿನಲ್ಲಿ ಅಪರಾಧವಾಗುತ್ತದೆ ಎಂದರು.

ವೇದಿಕೆ ಮೇಲೆ ಡಾ. ಎನ್. ಹಯವದನ, ಡಾ. ಸುಭಾಸ ಮೇಟಿ, ಪ್ರೊ. ವಿಕ್ರಂ ಶಿರೋಳ, ಪ್ರೊ. ಸ್ವಪ್ನ ಚನ್ನಗೌಡರ, ಡಾ. ಅರುಣ ಕುಂಬಿ, ಡಾ. ಆರ್. ಎಂ. ಪಾಟೀಲ, ಡಾ. ಸಂತೋಷ ಬುಜರಿ, ಡಾ. ರಾಜಶೇಖರ ಕುಣಬೇವು, ಡಾ. ಶ್ರೀನಿವಾಸ್ ಆರ್, ಡಾ. ಗಿರೀಶ ಯತ್ನಳ್ಳಿ, ರವಿ ಚೌವ್ಹಾಣ, ಮುಕುಂದ ಡಿ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಎಸ್.ಎಫ್. ಕೊಡ್ಲಿ, ಪ್ರೊ. ಅರುಣಕುಮಾರ ಸೇರಿ ವಿವಿಧ ವಿಭಾಗಗಳ ಉಪನ್ಯಾಸಕರು, ಪಾಲಕರು ಇದ್ದರು. ಪ್ರೊ. ಬಸವರಾಜ ಸೊರಟೂರ, ವಿದ್ಯಾರ್ಥಿಗಳಾದ ಅಪೂರ್ವ, ಸೃಷ್ಟಿ ನಿರೂಪಿಸಿದರು.




> ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ಮಾತನಾಡಿ, ಯುವ ಇಂಜೀಯರ್‌ಗಳು ದೇಶದ ವಿವಿಧ ಕ್ಷೇತ್ರಗಳಲ್ಲಿ ಹೊಸ ತಂತ್ರಜ್ಞಾನ ಕಂಡುಹಿಡಿದು ದೇಶದ ಅಭಿವೃದ್ಧಿಗೆ ಶ್ರೇಷ್ಠ ಕೊಡುಗೆ ಸಲ್ಲಿಸಬೇಕು. ಪಾಶ್ಚಾತ್ಯ ಸಂಸ್ಕೃತಿಗೆ ಮಾರು ಹೋಗದೇ ನಮ್ಮ ಭಾಷೆ, ಸಂಸ್ಕೃತಿ, ಸಂಪ್ರದಾಯ, ಸಮಾಜ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೈ ಜೋಡಿಸಬೇಕು. ದಿ.ವೆಂಕಪ್ಪ ಅಗಡಿಯವರು ಗ್ರಾಮೀಣ ಭಾಗದ ಬಡ, ರೈತರ ಮಕ್ಕಳು ಇಂಜಿನಿಯರಿಂಗ್ ಶಿಕ್ಷಣ ಹೊಂದಬೇಕು ಎಂಬ ಸದುದ್ದೇಶದಿಂದ ಸ್ಥಾಪಿಸಿದ ಅಗಡಿ ಸಂಸ್ಥೆಯು 2 ದಶಕಗಳಿಂದ ಶಿಕ್ಷಣ ರಂಗದಲ್ಲಿ ಅಮೂಲ್ಯವಾದ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

# ಬ್ಯಾಂಕುಗಳು ಸಾರ್ವಜನಿಕರ ಹಿತ ಕಾಪಾಡಬೇಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಣಕಾಸು ಸಂಸ್ಥೆಗಳು ಮತ್ತು ಬ್ಯಾಂಕುಗಳು ಕೇವಲ ಲಾಭ ಒಂದನ್ನೇ ಗುರಿಯನ್ನಾಗಿಸಿಕೊಳ್ಳದೇ ಸಾರ್ವಜನಿಕರ ಹಿತ ಕಾಪಾಡುವ ಸದುದ್ದೇಶಗಳೊಂದಿಗೆ ಕಾರ್ಯ ನಿರ್ವಹಿಸಬೇಕಾಗುತ್ತದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ಜಿಲ್ಲೆ ಗ್ರುಪ್‌ನ ಅಂಗ ಸಂಸ್ಥೆಯಾದ ಶ್ರೀ ಬೀರೇಶ್ವರ ಕೋ–ಆಪ್ ಕ್ರೆಡಿಟ್ ಸೊಸೈಟಿಯ ಲಕ್ಷ್ಮೇಶ್ವರ ಶಾಖೆಯಲ್ಲಿ ಶನಿವಾರ ಇ–ಸ್ಟಾಂಪ್ ಸೇವೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದು ಹಣಕಾಸು ಸಂಸ್ಥೆಗಳು ಸಾಕಷ್ಟು ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಗ್ರಾಹಕರ ವಿಶ್ವಾಸವೇ ಅವುಗಳಿಗೆ ಮುಖ್ಯ. ಉತ್ತಮ ಸೇವೆ ಒದಗಿಸುವ ಮೂಲಕ ಅವರಿಗೆ ಸಹಕಾರಿ ಆಗಿರಬೇಕು. ಗ್ರಾಹಕರೇ ಇಲ್ಲದಿದ್ದರೆ ಯಾವುದೇ ಸಂಸ್ಥೆ ಅಥವಾ ಬ್ಯಾಂಕು ನಡೆಯಲು ಸಾಧ್ಯವಿಲ್ಲ. ಗ್ರಾಹಕರೂ ಕೂಡ ಹಣಕಾಸು ಸಂಸ್ಥೆ ಹಾಗೂ ಬ್ಯಾಂಕುಗಳಿಂದ ಪಡೆದ ಸಾಲವನ್ನು ಸರಿಯಾದ ಸಮಯಕ್ಕೆ ಹಿಂತಿರುಗಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶಾಖೆಯ ಸಲಹಾ ಸಮಿತಿ ಸದಸ್ಯರಾದ ಪಶುಪತೆಪ್ಪ ಶಿರಹಟ್ಟಿ, ವೀರಣ್ಣ ಪವಾಡದ, ವೀರಣ್ಣ ಅಂಗಡಿ, ವಿಜಯ ಬೂದಿಹಾಳ, ಗಂಗಾಧರ ಶಿರಹಟ್ಟಿ, ಶಾಖೆ ವ್ಯವಸ್ಥಾಪಕರಾದ ಪವನ ದಾನಿ, ಸಿಬ್ಬಂದಿಗಳಾದ ಶಿವರಾಜ ಬಿದರಳ್ಳಿ, ನಾಗರಾಜ ತೋಟರ, ಕೃಷ್ಣಾ ಶೇವಾಳೆ, ಬಸವರಾಜ ಎಂ ಹಾಗೂ ಗ್ರಾಹಕರು ಇದ್ದರು.

# ಬಸವಣ್ಣ ಒಂದು ಜಾತಿಗೆ ಸೇರಿದವರಲ್ಲ: ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಮೈಸೂರು

ನಮ್ಮ ಸರ್ಕಾರ ಆರಂಭಿಸಿರುವ 600 ಕೋಟಿಗೂ ಅಧಿಕ ವೆಚ್ಚದ ಅನುಭವ ಮಂಟಪವನ್ನು ಮುಂದಿನ ವರ್ಷ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬಸವ ಬಳಗಗಳ ಒಕ್ಕೂಟ, ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಆಯೋಜಿಸಿದ್ದ "ಬಸವ ಜಯಂತಿ–2025 ನಮ್ಮ ನಡೆ ಅನುಭವ ಮಂಟಪದ ಕಡೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಸಕಲ ವೃತ್ತಿಗಳೂ ಪವಿತ್ರ ಎನ್ನುವ ಮಹಾನ್ ಮಾನವೀಯ ಸಂದೇಶವನ್ನು ಜಗತ್ತಿಗೆ ನೀಡಿದ ಬಸವಣ್ಣನವರು ಕ್ರಾಂತಿಪುರುಷ ಮಾತ್ರವಲ್ಲ, ವಿಶ್ವ ವಿಖ್ಯಾತ ಆರ್ಥಿಕ ತಜ್ಞರೂ ಆಗಿದ್ದರು. ಕಾಯಕ ಮತ್ತು ದಾಸೋಹದ ಶ್ರಮ ಸಂಸ್ಕೃತಿಯ ಮಹತ್ವವನ್ನು ಬಸವಣ್ಣ ಇಡೀ ವಿಶ್ವಕ್ಕೆ ನೀಡಿದರು ಎಂದು ವಿವರಿಸಿದರು.

ಬಸವಾದಿ ಶರಣರಿಂದ ಆದ ಜಾತಿ ವ್ಯವಸ್ಥೆ ವಿರುದ್ಧದ ಸಾಮಾಜಿಕ ಕ್ರಾಂತಿ ಪ್ರಪಂಚದ ಬೇರೆ ಎಲ್ಲೂ ನಡೆದಿಲ್ಲ. ಸಮ ಸಮಾಜ ಮತ್ತು ಜಾತ್ಯತೀತ ಸಮಾಜ ನಿರ್ಮಾಣಕ್ಕಾಗಿ ಹೋರಾಡಿದ ಬಸವಾದಿ ಶರಣರು ನುಡಿದಂತೆ ನಡೆದರು ಎಂದು ವಿವರಿಸಿದರು. ಜಾತಿ, ವರ್ಗ ರಹಿತ ಮಾನವೀಯ ಸಮಾಜ ಅವರ ತುಡಿತವಾಗಿತ್ತು. ಬಸವಾದಿ ಶರಣರ ಅನುಭಾವವೇ ವಚನಗಳಾಗಿವೆ. ವಚನ ಎಂದರೆ ಮಾತು. ಕನ್ನಡ ಸಾಹಿತ್ಯದಲ್ಲಿ ವಚನ ಮತ್ತು ದಾಸ ಸಾಹಿತ್ಯ ದೊಡ್ಡ ಮೈಲಿಗಲ್ಲು. ಅಕ್ಷರ ಸಂಸ್ಕೃತಿಯಿಂದ ವಂಚಿತರನ್ನಾಗಿ ಮಾಡಲಾಗಿದ್ದವರಿಗೆ ವಚನ ಸಾಹಿತ್ಯ ಆಡು ಮಾತಿನ ಮೂಲಕ ತಲುಪಿತು ಎಂದು ಸಿದ್ದರಾಮಯ್ಯ ಹೇಳಿದರು.

# ಜನ ಔಷಧಿ ಕೇಂದ್ರ ಮುಚ್ಚುವ ನಿರ್ಧಾರ ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಆರೋಗ್ಯ ಸಚಿವ ದಿನೇಶ ಗುಂಡುರಾವ್ ಅವರು ಸರ್ಕಾರಿ ಆಸ್ಪತ್ರೆ ಹಾಗು ಸುತ್ತಮುತ್ತಲಿನ ವಾತಾವರಣದಲ್ಲಿ ಕೇಂದ್ರ ಸರ್ಕಾರದ ಜನ ಔಷದಿ ಕೇಂದ್ರವನ್ನು ಮುಚ್ಚುವ ನಿರ್ಧಾರಕ್ಕೆ ಸಾರ್ವಜನಿಕರಿಂದ ಅಸಮಾಧಾನ ವ್ಯಕ್ತವಾಗುತ್ತಿದೆ ಎಂದು ಬಿಜೆಪಿ ಮುಖಂಡ ಅನಿಲ ಅಬ್ಬಿಗೇರಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸರ್ಕಾರದ ಈ



ನಿರ್ಧಾರ ಖಂಡನೀಯ. ಕೇಂದ್ರ ಸರ್ಕಾರವು ದೇಶಾದ್ಯಂತ ಬಡವರಿಗೆ, ದೀನದಲಿತರಿಗೆ ಕಡಿಮೆ ದರದಲ್ಲಿ ಔಷಧಿ ದೊರೆಯಬೇಕೆಂದು ಜನ ಔಷಧಿ ಯೋಜನೆಯನ್ನು ಜಾರಿಗೆ ತಂದಿತ್ತು. ಸಾರ್ವಜನಿಕರೂ ಕೂಡಾ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ. ಯೋಜನೆಯ ಉದ್ದೇಶ ಅರಿಯದೇ ರಾಜ್ಯ ಸರ್ಕಾರವು ಹೊಟ್ಟೆಕಿಚ್ಚಿನಿಂದ ದ್ವೇಷದ ರಾಜಕಾರಣ ಮಾಡಲು ಹೊರಟಿದೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಜನ ಔಷಧಿ ಕೇಂದ್ರ ಮುಚ್ಚುವ ಹುನ್ನಾರವನ್ನು ಕೈಬಿಟ್ಟು ಈ ಮೊದಲಿನಂತೆಯೇ ಮುಂದುವರೆಸಲು ಅವಕಾಶ ನೀಡಬೇಕೆಂದು ಅವರು ಒತ್ತಾಯಿಸಿದ್ದಾರೆ.

# ಕಲಿಯುವುದು–ಕಲಿಸುವುದು ನಿರಂತರ ಪ್ರಕ್ರಿಯೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸೇವೆ ದೇವರ ಸೇವೆಯಾಗಿದ್ದು, ಈ ಸೇವಾ ಭಾಗ್ಯ ಪಡೆದ ಶಿಕ್ಷಕರು ಸದಾ ಗೌರವಾರ್ಹರು. ಕಲಿಯುವುದು–ಕಲಿಸುವುದು ನಿರಂತರ ಪ್ರಕ್ರಿಯೆಯಾಗಿದ್ದು, ನಿವೃತ್ತಿ ನಂತರವೂ ಶಿಕ್ಷಕರು ಮಕ್ಕಳಿಗೆ ಜ್ಞಾನ ಹಂಚುವ ಕಾರ್ಯವನ್ನು ನಿರಂತರವಾಗಿ ಮಾಡಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪಟ್ಟಣದ ಎಪಿಎಂಸಿ ವರ್ತಕರ ಸಭಾ ಭವನದಲ್ಲಿ ಶಿಕ್ಷಕ ಸಮುದಾಯದಿಂದ ಗದಗ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ, ಅಡರಕಟ್ಟಿಯ ಎಂ.ಎಂ. ಹವಳದ ಅವರ ನಿವೃತ್ತಿಯ ನಿಮಿತ್ತ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಶಿಕ್ಷಕರ ಪಾತ್ರ ಅಪಾರವಾಗಿದೆ. ಶಿಕ್ಷಕರು ಶ್ರೇಷ್ಠ ಶಿಷ್ಯರನ್ನು ರಾಷ್ಟ್ರಕ್ಕೆ ಸಮರ್ಪಿಸುವ ಕೆಲಸ ಸದಾ ಮಾಡುತ್ತಿರಬೇಕು. 3 ದಶಕಗಳು ಶಿಕ್ಷಕ ವೃತ್ತಿಯಲ್ಲಿ ಶ್ರೇಷ್ಠ ಸೇವೆ ಸಲ್ಲಿಸಿದ ಅನುಭವ ಇರುವ, ಅದರಲ್ಲೂ ಕ್ರೀಡಾ ಕ್ಷೇತ್ರದಲ್ಲಿ ವಿಶಿಷ್ಟವಾದ ಸೇವೆ ಸಲ್ಲಿಸಿದ ಶಿಕ್ಷಕರಾದ ಎಂ.ಎಂ. ಹವಳದ ಅವರು ಮುಂದೆಯೂ ಮಕ್ಕಳಿಗೆ ಮಾರ್ಗದರ್ಶನ ಮಾಡುವುದನ್ನು ಮುಂದುವರಿಸಬೇಕು ಎಂದರು.

ಡಿಡಿಪಿಐ ಆರ್.ಎಸ್. ಬುರಡಿ, ಬಿಇಓ ಹೆಚ್. ನಾಣಕಿನಾಯ್ಕ್ ಮಾತನಾಡಿ, ದೈಹಿಕ ಶಿಕ್ಷಣದ ಸಂಪನ್ಮೂಲ ಶಿಕ್ಷಕರಾಗಿರುವ ಎಂ.ಎಂ. ಹವಳದರು ನಿವೃತ್ತಿಯ ನಂತರವೂ ಮಕ್ಕಳ ಶ್ರೇಯೋಭಿವೃದ್ಧಿ, ಶೈಕ್ಷಣಿಕ ಪ್ರಗತಿಗಾಗಿ ತಮ್ಮ ಅಮೂಲ್ಯವಾದ ಸೇವೆ, ಸಲಹೆ–ಸಹಕಾರ ನೀಡಬೇಕು ಎಂದರು. ಈ ವೇಳೆ ಬಿಇಓ ವಿ.ವಿ. ನಡುವಿನಮನಿ, ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ, ನೌಕರ ಸಂಘದ ತಾಲೂಕಾಧ್ಯಕ್ಷ ಗುರುರಾಜ ಹವಳದ, ಬಿ.ಎಸ್. ಹರ್ಲಾಪುರ, ಈಶ್ವರ ಮೆಡ್ಲೇರಿ. ಎಂ.ಎಸ್. ಕೂಬ್ಯಾಳ, ಎಸ್.ಸಿ. ಗೋಲಪ್ಪನವರ, ಹೆಚ್.ಎಂ. ಮುಳಗುಂದ, ಎಂ.ಆರ್. ಹವಳದ, ಸಿ.ಜೆ. ಹಿರೇಮಠ, ಎ.ಎಚ್. ಇಚ್ಚಂಗಿ, ಸಿ.ಎಸ್. ನೇಕಾರ, ಸತೀಶ ಬೋಮಲೆ, ಬಿ.ಎಂ. ಕುಂಬಾರ, ಆರ್. ಮಾಂತೇಶ, ಎಂ.ಎ. ನದಾಫ್, ಎಂ.ಆಯ್. ಕಣಿಕೆ, ಬಿ.ಎಂ. ಯರಗುಪ್ಪಿ, ಸಾಂಬಯ್ಯ ಹಿರೇಮಠ ಸೇರಿದಂತೆ ಶಿಕ್ಷಕ ವೃಂದದವರು ಇದ್ದರು. ಶಿಷ್ಯ ಬಳಗದವರು ಹವಳದ ದಂಪತಿಗಳನ್ನು ಸನ್ಮಾನಿಸಿದರು.

# ಮಳೆಗೆ ಶೇಂಗಾ ಬೆಳೆ ಹಾನಿ: ರೈತ ಕಂಗಾಲು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಮೂರು–ನಾಲ್ಕು ದಿನಗಳಿಂದ ಸತತವಾಗಿ ಬಿದ್ದ ಮಳೆಗೆ ಸಮೀಪದ ಕೋಡಿಕೊಪ್ಪದ ರೈತ ದುಂಡಪ್ಪ ನಾಶಿಪುಡಿ ಕಟಾವು ಮಾಡಿದ ಶೇಂಗಾ ಬೆಳೆ ಕೊಳೆತು ಹೋಗಿದೆ. ಇದರಿಂದ ಅಲ್ಪ ಬೆಳೆಯ ಆದಾಯದ ನಿರೀಕ್ಷೆಯಲ್ಲಿದ್ದ ರೈತ ಕಂಗಾಲಾಗಿದ್ದಾನೆ.

ನೀರಾವರಿ ಜಮೀನಿನಲ್ಲಿ ಸಾಕಷ್ಟು ಸಂಕಷ್ಟಗಳ ನಡುವೆಯೇ ಶೇಂಗಾ ಬೆಳೆಯನ್ನು ಬೆಳೆಯಲಾಗಿತ್ತು.

ಬೆಳೆಗೆ ಪ್ರಾರಂಭದಿಂದಲೂ ಅಲ್ಲಲ್ಲಿ ಬೆಂಕಿ ಸಿಡಿ, ಬೂದಿರೋಗ ಕಾಣಿಸಿಕೊಂಡಿತ್ತು. ಔಷಧಿ ಸಿಂಪಡಿಸಿ ರೋಗ ಬಾಧೆ ನಿವಾರಿಸಿಕೊಂಡಿದ್ದು, ಕಷ್ಟಕ್ಕೆ ತಕ್ಕ ಪ್ರತಿಫಲ ಸಿಗುತ್ತದೆ.

ಹಾಕಿದ ಬಂಡವಾಳ ಬಾರದಿದ್ದರೂ ದನಕರುಗಳಿಗೆ ಶೇಂಗಾ ಹೊಟ್ಟು ಸಿಗುತ್ತದೆ ಎಂಬ ಧೈರ್ಯದಲ್ಲಿದ್ದ ರೈತನಿಗೆ ಜಮೀನಿನಲ್ಲಿ ಶೇಂಗಾದೊಂದಿಗೆ ಬಳ್ಳಿಯೂ ಕೊಳೆಯುತ್ತಿರುವುದನ್ನು ಕಂಡು ಕಂಬನಿ ಮಿಡಿಯುತ್ತಿದ್ದಾನೆ. ಒಂದೆಡೆ ಬೆಳೆ ಇಲ್ಲದೆ, ಮತ್ತೊಂದೆಡೆ ಜಾನುವಾರುಗಳಿಗೆ ಹೊಟ್ಟಿಲ್ಲದೆ ಸಂಕಷ್ಟ ಎದುರಿಸುವಂತಾಗಿದೆ. ಸಾಲ ಮಾಡಿ ಕೃಷಿಗೆ ಹಣ ಸುರಿದ ರೈತರು ಕೈಹತ್ತದ ಬೆಳೆಗಳಿಂದಾಗಿ ಪರಿತಪಿಸುವಂತಾಗಿದೆ. ಎರಡು ದಿನಗಳ ಹಿಂದೆ ಶೇಂಗಾ ಬೆಳೆಯನ್ನು ಕಟಾವು ಮಾಡಲಾಗಿತ್ತು.

ಇನ್ನೇನು ಶೇಂಗಾ ಬೆಳೆಯನ್ನು ಒಂದೆಡೆ ಸಂಗ್ರಹಿಸಿ ರಾಶಿ ಮಾಡಬೇಕು ಎನ್ನುವಷ್ಟರಲ್ಲಿ ಮಳೆ ಸುರಿದು ಶೇಂಗಾ ಬೆಳೆಯನ್ನು ಸಂಪೂರ್ಣ ಕೊಳೆತು ಹೋಗುವಂತೆ ಮಾಡಿದೆ. ಇದರಿಂದ ಕೈಗೆ ಬಂದ ತುತ್ತು ಬಾಯಿಗೆ ಬಾರದ ಸ್ಥಿತಿ ರೈತನದ್ದಾಗಿದೆ.

> ಸಾವಿರಾರು ರೂಪಾಯಿ ಖರ್ಚು ಮಾಡಿ ಬೆಳೆದಿದ್ದ ಶೇಂಗಾ ಬೆಳೆ ಮಳೆಯಿಂದಾಗಿ ಕಣ್ಣ ಮುಂದೆಯೇ ಕಮರಿ ಹೋಗಿದೆ.
>
> ಜಾನುವಾರುಗಳಿಗೆ ಹೊಟ್ಟಾದರೂ ಸಿಗುತ್ತದೆ ಎಂದರೆ ಅದೂ ಇಲ್ಲವಾಗಿದೆ. ಇದರಿಂದಾಗಿ ಸಾಕಷ್ಟು ಆರ್ಥಿಕವಾಗಿ ನಷ್ಟವನ್ನು ಅನುಭವಿಸುವಂತಾಗಿದೆ. ಜಿಲ್ಲಾಡಳಿತ ಬೆಳೆ ಹಾನಿ ಪರಿಹಾರ ನೀಡಬೇಕು.
>
> **– ದುಂಡಪ್ಪ ನಾಶಿಪುಡಿ.**
> ರೈತ, ಕೋಡಿಕೊಪ್ಪ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka